ಸಂಪುಟ : 10 ಸಂಚಿಕೆ: 92 ಪುಟ : 4+2 ಬೆಲೆ: 3.00 ರವಿವಾರ ಮೇ 11 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 92 Pages : 4+2 Price : 3.00 Sunday May 11 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮದಲ್ಲಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಮತ**

# ಒಗ್ಗಟ್ಟಿನಿಂದ ಬಾಳಿ ಸದೃಢ ಸಮಾಜ ನಿರ್ಮಿಸೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಾತಿ, ಮತ ಎಂದು ಬೇಧಭಾವ ಮಾಡದೆ ಇಡೀ ಮನುಕುಲದ ಶ್ರೇಯಸ್ಸಿಗೆ ದಾರಿ ತೋರಿದ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರಿಗೆ ನಾವೆಲ್ಲರೂ ಸದಾ ಚಿರಋಣಿಯಾಗಿರಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ನಗರದ ಶ್ರೀ ಶಿವಾನಂದ ಕಲ್ಯಾಣ ಮಂಟಪದಲ್ಲಿ ಶನಿವಾರ ಜರುಗಿದ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



> ಸರ್ಕಾರದಿಂದ ಏರ್ಪಡಿಸುವ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಿ, ಮಹನೀಯರ ತತ್ವಾದರ್ಶಗಳು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಯಶಸ್ವಿಯಾಗಿ ಆಯೋಜನೆ ಆಗಬೇಕು. ಮಹನೀಯರ ಜಯಂತಿಗಳು ಕೇವಲ ಒಂದು ಸಮುದಾಯಕ್ಕೆ ಮಾತ್ರ ಸೀಮಿತವಾಗಬಾರದು. ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರಿಗೂ ತಲುಪಿಸುವ ಕಾರ್ಯವಾಗಬೇಕು. ಹೇಮರಡ್ಡಿ ಮಲ್ಲಮ್ಮ ಹಾಗೂ ವೇಮನರ ದೇವಸ್ಥಾನ ಹಾಗೂ ಕಲ್ಯಾಣ ಮಂಟಪ ನಿರ್ಮಾಣ ಕಾಮಗಾರಿಯನ್ನು ಶೀಘ್ರದಲ್ಲಿಯೇ ಪ್ರಾರಂಭಿಸಲಾಗುವದು.
>
> – ಎಚ್.ಕೆ. ಪಾಟೀಲ,
> ಜಿಲ್ಲಾ ಉಸ್ತುವಾರಿ ಸಚಿವರು.

ದಾರ್ಶನಿಕ, ತತ್ವಜ್ಞಾನಿ ಮಹಾಯೋಗಿ ವೇಮನರನ್ನು ತಿದ್ದುವ ಮೂಲಕ ಸಮಾಜಕ್ಕೆ ವೇಮನರಂತಹ ತತ್ವಜ್ಞಾನಿಯನ್ನು ನೀಡಿದ ಮಹಾನುಭಾವೆ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ತತ್ವ-ಆದರ್ಶಗಳನ್ನು ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅತಿಥಿ ಸತ್ಕಾರ, ಹಸಿವು ನೀಗಿಸುವ ಕಾರ್ಯದಲ್ಲಿ ಸದಾ ಮುಂದಿರುವ ರೆಡ್ಡಿ ಸಮುದಾಯ ಯಾವಾಗಲೂ ನ್ಯಾಯಪರವಾದ ಹೋರಾಟಲ್ಲಿ ಮುಂಚೂಣಿಯಲ್ಲಿದ್ದು, ಸಮಾಜದಲ್ಲಿ ಎಲ್ಲರೂ ಒಗ್ಗಟ್ಟಾಗಿ ಬಾಳುವದರ ಮೂಲಕ ಸದೃಢ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಕುಟುಂಬಗಳು ಒಗ್ಗಟ್ಟಿನಿಂದ ಹೇಗೆ ಸಾಗಬೇಕು ಎಂಬ ಪರಿಪಾಠವನ್ನು ಕಲಿಸಿದ ಮಹಾಮಾತೆ ಹೇಮರಡ್ಡಿ ಮಲ್ಲಮ್ಮ ಸಂಸಾರದಲ್ಲಿ ಬರುವ ಕಷ್ಟಗಳನ್ನು ಎದುರಿಸಲು ಮಾರ್ಗದರ್ಶನ ಮಾಡಿದ್ದು, ಅವರ ಮಾರ್ಗದರ್ಶನಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಅವರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅವರಂತೆ ಸ್ವಾರ್ಥವನ್ನು ತ್ಯಾಗ ಮಾಡಿ, ನಿಸ್ವಾರ್ಥ, ಸರಳ ಜೀವನ ನಡೆಸಲು ಪ್ರತಿಯೊಬ್ಬರೂ ಮುಂದಾಗಬೇಕು ಎಂದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ವೀಣಾ ತಿರ್ಲಾಪುರ ಹೇಮರಡ್ಡಿ ಮಲ್ಲಮ್ಮನವರ ತತ್ವಾದರ್ಶ, ಜೀವನ ಸಾಧನೆಗಳ ಕುರಿತು ಮಾತನಾಡಿ, ಪತಿಯಲ್ಲಿ ಪರಮಾತ್ಮನನ್ನು ಕಂಡವರು ಶರಣೆ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ. ಶಿವ-ಪಾರ್ವತಿಯರ ಮಹಾನ ಭಕ್ತೆಯಾಗಿದ್ದ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಭೂಲೋಕದಲ್ಲಿ ಸತ್ಯ, ಧರ್ಮ ಉಳಿಸಲು ಈ ಧರೆಗೆ ಬಂದರು ಎಂದರು.

ಮಲ್ಲಿಕಾರ್ಜುನನ ಪರಮ ಭಕ್ತೆಯಾಗಿದ್ದ ಮಲ್ಲಮ್ಮ ತನ್ನ ಬಳಗಕ್ಕೆಂದೂ ಬಡತನ ಬಾರದಿರಲಿ, ಅವರಿಗೆಂದೂ ಉಣ್ಣಲು-ಉಡಲು-ತೊಡಲು ಯಾವ ಕೊರತೆಯೂ ಆಗದಿರಲಿ, ಮಲ್ಲಿಕಾರ್ಜುನನ ಪೂಜೆ, ಜಾತ್ರೆ ಮತ್ತು ಉತ್ಸವಗಳು ನಿರಂತರ ನಡೆಯಬೇಕು ಎಂದು ಮಲ್ಲಿಕಾರ್ಜುನನಿಂದ ವರವನ್ನು ಪಡೆದಿದ್ದಾರೆ

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಸಮಾಜದಲ್ಲಿ ಮಾನವೀಯ ಮೌಲ್ಯಗಳು ಕುಸಿಯುತ್ತಿವೆ. ಮಹನೀಯರ ಆದರ್ಶಗಳನ್ನು ಮೆಲಕು ಹಾಕುವದರ ಮೂಲಕ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜ ಸುಧಾರಣೆಗಾಗಿ ಇಂತಹ ಮಹನೀಯರ ಜಯಂತಿಗಳನ್ನು ಆಚರಿಸಲಾಗುತ್ತಿದೆ. ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ಭಕ್ತಿಗೆ ಮೆಚ್ಚಿ ಶಿವನೇ ಪ್ರತ್ಯಕ್ಷವಾಗಿ ವರವನ್ನು ನೀಡಿದ್ದಾನೆ. ಕುಟುಂಬದಲ್ಲಿ ಕಷ್ಟಗಳು ಎದುರಾದರೂ ಸಹ ಸದಾ ಸಮಾಜದ ಒಳಿತಾಗಲಿ ಎಂದು ಸಾಕ್ಷಾತ್ ಶಿವನಿಂದ ವರ ಬೇಡುತ್ತಾಳೆ. ನಮಗೆ ಯಾರಾದರೂ ಕೆಟ್ಟದನ್ನು ಬಯಸಿದರೆ ಅವರಿಗೆ ಒಳ್ಳೆಯದನ್ನೇ ಬಯಸುವದರ ಮೂಲಕ ಉತ್ತಮ ಸಮಾಜ ನಿರ್ಮಾಣ ಮಾಡಬೇಕು ಎಂದರು.

▶▶3ನೇ ಪುಟಕ್ಕೆ

## ಭಾರತೀಯ ಸೇನೆಯ ಕಾರ್ಯಾಚರಣೆ ಶ್ಲಾಘನೀಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನಾಪಡೆಗಳು ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಮೂಲಕ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ (ಪಿಒಕೆ) ಒಂಬತ್ತು ಭಯೋತ್ಪಾದಕ ನೆಲೆಗಳನ್ನು ಧ್ವಂಸಗೊಳಿಸಿರುವುದು ಶ್ಲಾಘನೀಯ ಕಾರ್ಯಾಚರಣೆಯಾಗಿದೆ ಎಂದು ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಭಾರತೀಯ ಸೈನಿಕರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಭಾರತದ ಕಿರೀಟಪ್ರಾಯವಾದ ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿನ ಘಟನೆಯಲ್ಲಿ ಭಾರತೀಯ ಮಹಿಳೆಯರ ಸಿಂಧೂರ ಅಳಿಸಿದ ಉಗ್ರ ಸಂಘಟನೆಗಳಿಗೆ ಮತ್ತು ಆಂತರಿಕವಾಗಿ ಉಗ್ರವಾದಕ್ಕೆ ಬೆನ್ನೆಲುಬಾಗಿರುವ ಪಾಕಿಸ್ತಾನಕ್ಕೆ, ಉಗ್ರರ ನೆಲೆಗಳನ್ನು ನಾಶಪಡಿಸುವ ಮೂಲಕ ಹಾಗೂ ದೇಶದ ನಾಗರಿಕರ



ಹಾಗೂ ಮುಗ್ಧ ಪ್ರವಾಸಿಗರನ್ನು ಗುರಿಯಾಗಿಸಿ ದಾಳಿ ಮಾಡಿ 26 ಜನ ನಾಗರಿಕರನ್ನು ಹತ್ಯೆಗೈದ ಉಗ್ರರಿಗೆ ಆಪರೇಷನ್ ಸಿಂಧೂರ ದಾಳಿಯ ಮೂಲಕ ಯಶಸ್ವಿ ಕಾರ್ಯಾಚರಣೆ ಕೈಗೊಂಡು ಭಾರತೀಯರಿಗೆ ನೆಮ್ಮದಿಯನ್ನು ದೊರಕಿಸಿದ ಭಾರತೀಯ ಸೈನಿಕರೆಲ್ಲರೂ ಅಭಿನಂದನಾರ್ಹರು. ಪಾಕಿಸ್ತಾನ ಇಲ್ಲಿಗೇ ತನ್ನ ಕೆಟ್ಟ ಚಾಳಿಯನ್ನು ಕೈಬಿಟ್ಟರೆ ಒಳ್ಳೆಯದು. ಇಲ್ಲವಾದರೆ ಇದರ ಅಂತ್ಯ ಇನ್ನೂ ಘೋರವಾಗಿರುತ್ತದೆ. ಭಯೋತ್ಪಾದಕತೆಯನ್ನು ಮಟ್ಟ ಹಾಕಲು ಪಣತೊಟ್ಟಿರುವ ಭಾರತೀಯ ಸೈನಿಕರಿಗೆ ಪಕ್ಷಾತೀತವಾಗಿ ದೇಶದ ಸಮಸ್ತ ನಾಗರಿಕರು ಬೆಂಬಲಿಸಬೇಕು ಎಂದವರು ಅಭಿಪ್ರಾಯಪಟ್ಟಿದ್ದಾರೆ.

**ಯುದ್ಧದ ಸಂದರ್ಭದಲ್ಲಿ ಯಾವುದೇ ಬಿಕ್ಕಟ್ಟನ್ನು ಎದುರಿಸಲು ಸಿದ್ಧ: ಗೃಹಸಚಿವ ಜಿ. ಪರಮೇಶ್ವರ**

# ಭದ್ರತೆಯ ಹಿನ್ನೆಲೆಯಲ್ಲಿ ಪೊಲೀಸರಿಗೆ ರಜೆಯಿಲ್ಲ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ದೇಶದಲ್ಲಿನ ಪ್ರಸ್ತುತ ಭದ್ರತಾ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಪೊಲೀಸರಿಗೆ ರಜೆ ನೀಡಲಾಗುವುದಿಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ ಶನಿವಾರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾವಾಗ ಸಹಜ ಸ್ಥಿತಿ ಮರಳುತ್ತದೆ ಎಂದು ನಮಗೆ ತಿಳಿದಿಲ್ಲ. ಈ ಸಮಯದಲ್ಲಿ ನಾವು ಪೊಲೀಸರ ಯಾವುದೇ ರಜೆಗಳನ್ನು ಅನುಮೋದಿಸುವುದಿಲ್ಲ. ಕೇಂದ್ರ ಸರ್ಕಾರವು ಯಾವಾಗ ಸಹಜ ಸ್ಥಿತಿ ಮರಳುತ್ತದೆ ಎಂದು ನಮಗೆ ತಿಳಿಸುವವರೆಗೂ ನಾವು ಜಾಗರೂಕರಾಗಿರಬೇಕು ಎಂದು ಅವರು ಸುದ್ದಿಗಾರರಿಗೆ



ತಿಳಿಸಿದರು. ರಾಜ್ಯ ಸರ್ಕಾರವು ಎಲ್ಲೆಡೆ, ವಿಶೇಷವಾಗಿ ಕರಾವಳಿ ಪ್ರದೇಶದಲ್ಲಿ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು. ಯುದ್ಧದ ಸಮಯದಲ್ಲಿ ನಮ್ಮ ಹಿಂದಿನ ಅನುಭವದಿಂದ ಕಲಿಯುತ್ತಾ, ಕರಾವಳಿ ಪ್ರದೇಶಗಳಲ್ಲಿ ಭದ್ರತೆ ಬಲವಾಗಿರಬೇಕು.

> ಯುದ್ಧದಂತಹ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಉದ್ಭವಿಸಬಹುದಾದ ಯಾವುದೇ ಬಿಕ್ಕಟ್ಟನ್ನು ಎದುರಿಸಲು ಅಗತ್ಯ ವಸ್ತುಗಳು ಮತ್ತು ಇತರ ಎಲ್ಲಾ ಉಪಕರಣಗಳ ಲಭ್ಯತೆಯನ್ನು ಮುಖ್ಯಮಂತ್ರಿ ಪರಿಶೀಲಿಸಲಿದ್ದಾರೆ.
>
> ಆಹಾರ ಧಾನ್ಯಗಳು, ಅಗತ್ಯ ವಸ್ತುಗಳು, ನೀರು, ಆಸ್ಪತ್ರೆಗಳು ಮತ್ತು ಔಷಧಿಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವ ವ್ಯವಸ್ಥೆಗಳನ್ನು ಮಾಡಬೇಕಾಗಿದೆ. ಇದು ಕೇವಲ ಸಿದ್ಧತೆಯಾಗಿದೆ ಎಂದು ಸಚಿವ ಜಿ. ಪರಮೇಶ್ವರ ಹೇಳಿದರು.

ಉತ್ತರ ಕನ್ನಡದಿಂದ ದಕ್ಷಿಣ ಕನ್ನಡದವರೆಗೆ ನಾವು ಕರಾವಳಿ ರೇಖೆಯ ಉದ್ದಕ್ಕೂ ಜಾಗರೂಕರಾಗಿರಬೇಕು ಎಂದು ಸಚಿವರು ವಿವರಿಸಿದರು.

ಕರಾವಳಿ ಪ್ರದೇಶದಲ್ಲಿ ಮೂರು ಹಂತದ ಭದ್ರತೆಯಿದ್ದು, ಅಲ್ಲಿ ಪೊಲೀಸ್, ಬಂದರುಗಳು ಮತ್ತು ಭಾರತೀಯ ನೌಕಾಪಡೆಯಿಂದ ವ್ಯವಸ್ಥೆ ಮಾಡಲಾಗಿದೆ. ಯಾವುದೇ ಪರಿಸ್ಥಿತಿಯನ್ನು ಎದುರಿಸಲು ರಾಜ್ಯ ಸರ್ಕಾರದ ಸನ್ನದ್ಧತೆಯನ್ನು ಪರಿಶೀಲಿಸಲು ಸಿದ್ದರಾಮಯ್ಯ ಅವರು ಗೃಹ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ ಎಂದು ಸಚಿವರು ವಿವರಿಸಿದರು.

ಕೇಂದ್ರವು ಎಲ್ಲಾ ರಾಜ್ಯ ಸರ್ಕಾರಗಳಿಗೆ ಸಲಹೆಗಳನ್ನು ನೀಡಿದ್ದು, ಅದಕ್ಕೆ ಅನುಗುಣವಾಗಿ ಕರ್ನಾಟಕ ಸರ್ಕಾರ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ತಿಳಿಸಿದರು.

## ನೌಕರರ ಸಾರ್ವತ್ರಿಕ ವರ್ಗಾವಣೆಗೆ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆಗೆ ಮೇ 15ರಿಂದ ಜೂನ್ 14ರವರೆಗೆ ಅವಕಾಶ ನೀಡಲಿದೆ ಎಂದು ತಿಳಿದುಬಂದಿದ್ದು, ಈ ವರ್ಗಾವಣೆ ವಿಚಾರವಾಗಿ ಶುಕ್ರವಾರ ನಡೆದ ಸಚಿವ ಸಂಪುಟ ಸಭೆಯ ಅನುಮೋದನೆಗೆ ಪ್ರಸ್ತಾವ ಮಂಡಿಸಿದೆ ಎನ್ನಲಾಗಿದೆ.

ಗ್ರೂಪ್ ಎ, ಬಿ, ಸಿ ಮತ್ತು ಡಿ ವರ್ಗದ ಅಧಿಕಾರಿಗಳು, ನೌಕರರನ್ನು ಕಾರ್ಯನಿರತ ವೃಂದ ಬಲದ ಶೇ.6ರಷ್ಟು ಮೀರದಂತೆ ವರ್ಗಾವಣೆ ಮಾಡುವುದಕ್ಕೆ ಮುಂದಾಗಿದೆ ಎಂದು ತಿಳಿದು ಬಂದಿದೆ. ಒಂದು ಸ್ಥಳದಲ್ಲಿ ಎರಡು ವರ್ಷ ಕರ್ತವ್ಯ ಅವಧಿ ಪೂರ್ಣಗೊಳಿಸಿದ ಗ್ರೂಪ್ 'ಎ' ಮತ್ತು 'ಬಿ' ವೃಂದದ ಅಧಿಕಾರಿಗಳು, ನಾಲ್ಕು ವರ್ಷ ಪೂರ್ಣಗೊಳಿಸಿದ 'ಸಿ' ವೃಂದದ ಹಾಗೂ ಏಳು ವರ್ಷ ಪೂರ್ಣಗೊಳಿಸಿದ 'ಡಿ' ವೃಂದದ ನೌಕರರು ವರ್ಗಾವಣೆಗೆ ಅರ್ಹರು.

'ಎ' ಮತ್ತು 'ಬಿ' ವೃಂದ ಅಧಿಕಾರಿಗಳ ವರ್ಗಾವಣೆ ಪ್ರಸ್ತಾವವನ್ನು ಆಡಳಿತ ಇಲಾಖೆಯ ಮೂಲಕವೇ ಸಚಿವರಿಗೆ ಸಲ್ಲಿಸಬೇಕು ಎನ್ನುವ ನಿಯಮವನ್ನು ಕೂಡ ತರಲಾಗಿದೆ ಎಂದು ತಿಳಿದು ಬಂದಿದ್ದು, ಎ ಮತ್ತು ಬಿ ವೃಂದದ ಅಧಿಕಾರಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಆಯಾ ಇಲಾಖೆಯ ಸಚಿವರಿಗೆ, ಸಿ, ಡಿ ವೃಂದದ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಆಯಾ ನೇಮಕಾತಿ ಪ್ರಾಧಿಕಾರಗಳಿಗೆ ಅಧಿಕಾರ ನೀಡಲು ಪ್ರಸ್ತಾಪಿಸಲಾಗಿದೆ.

2025-26ನೇ ಸಾಲಿನ ಸಾರ್ವಜನಿಕ ವರ್ಗಾವಣೆ ಮಾರ್ಗಸೂಚಿಗಳನ್ನು ಹೊರಡಿಸಲು ಮತ್ತು ಸದರಿ ಮಾರ್ಗಸೂಚಿಯನ್ನು ಪರಿಷ್ಕರಿಸಲು ಹಾಗೂ ವರ್ಗಾವಣಾ ಅವಧಿಯನ್ನು ವಿಸ್ತರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಧಿಕಾರ ನೀಡಲು ಸಚಿವ ಸಂಪುಟ ಸಭೆ ನಿರ್ಣಯಿಸಿದೆ ಎಂದು ಕಾನೂನು ಸಚಿವರಾದ ಹೆಚ್.ಕೆ. ಪಾಟೀಲ್ ಅವರು ತಿಳಿಸಿರುವದಾಗಿ ವರದಿಯಾಗಿದೆ.

**ತಾತ್ಕಾಲಿಕವಾಗಿ ಹಾಕಿರುವ ಅಂಗಡಿಗಳನ್ನು ತೆರವುಗೊಳಿಸುವಂತೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ ಆರಂಭ**

## ಚಿನ್ನದ ಮೊಟ್ಟೆ ಇಡುವ ಕೋಳಿಯಾದ ಜಾತ್ರೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಾತ್ರೆಯ ನೆಪದಲ್ಲಿ ತಿಂಗಳಾನುಗಟ್ಟಲೆ ಸಾರ್ವಜನಿಕ ರಸ್ತೆಯಲ್ಲಿ ಅನ್ಯ ಧರ್ಮದ, ಅನ್ಯ ರಾಜ್ಯದ ವ್ಯಾಪಾರಸ್ಥರು ವ್ಯಾಪಾರ ಮಾಡುತ್ತ ಸಾರ್ವಜನಿಕ ಸಂಚಾರ ವ್ಯವಸ್ಥೆಗೆ ಅಡ್ಡಿಪಡಿಸುವುದರ ಜೊತೆಗೆ ಸ್ಥಳೀಯ ವ್ಯಾಪಾರಿಗಳ ಹೊಟ್ಟೆಯ ಮೇಲೆ ಕಲ್ಲು ಹಾಕುತ್ತಿರುವುದನ್ನು ವಿರೋಧಿಸಿ ಹಾಗೂ ಈ ಕೂಡಲೇ ತಾತ್ಕಾಲಿಕವಾಗಿ ಹಾಕಿರುವ ಅಂಗಡಿಗಳನ್ನು ತೆರವುಗೊಳಿಸುವಂತೆ ಆಗ್ರಹಿಸಿ ಶ್ರೀರಾಮ ಸೇನಾ, ಅಟೋ ಸೇನಾ ಹಾಗೂ ದಲಿತ ಮಿತ್ರ ಮೇಳ ಇವುಗಳ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಶನಿವಾರ ಅನಿರ್ದಿಷ್ಟಾವಧಿ ಧರಣಿ ಪ್ರಾರಂಭಿಸಿದರು. ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ ಮಾತನಾಡಿ, ಸ್ಥಳೀಯ ವ್ಯಾಪಾರಸ್ಥರು ತೆರಿಗೆ, ಲೈಸನ್ಸ್‌ಗಳನ್ನು ಪಡೆದು ವ್ಯಾಪಾರ ಮಾಡುತ್ತಿರುವ ಹಣಕ್ಕಿಂತ ತೆ-ೂಂಟದಾರ್ಯ ಜಾತ್ರೆಯಿಂದ ಚಿನ್ನದ ಮೊಟ್ಟೆ ಇಡುವ ಕೋಳಿ ದೊರೆತಂತಾಗಿದೆ. ಹಾಗಾಗಿ ಜನರ ಹಾಗೂ ಸ್ಥಳೀಯ ವ್ಯಾಪಾರಸ್ಥರ ಸಮಸ್ಯೆಗೆ ನಗರಸಭೆ ಸ್ಪಂದಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಶಾರೀರಿಕ ಪ್ರಮುಖರಾದ ಮಹೇಶ ರೋಖಡೆ, ಜಿಲ್ಲಾಧ್ಯಕ್ಷ ಸೋಮು ಗುಡಿ, ದಲಿತ ಮಿತ್ರ ಮೇಳ ಅಧ್ಯಕ್ಷ ಕುಮಾರ ನಡಗೇರಿ, ಉಪಾಧ್ಯಕ್ಷ ವೆಂಕಟೇಶ ದೊಡ್ಡಮನಿ, ಸತೀಶ ಕುಂಬಾರ, ಕಿರಣ ಹಿರೇಮಠ, ಹುಲಗಪ್ಪ ವಾಲ್ಮೀಕಿ, ಶ್ರೀರಾಮ ಸೇನಾ ಗದಗ ತಾಲೂಕಾಧ್ಯಕ್ಷ ಭರತ ಲದ್ದಿ, ಮುಂಡರಗಿ ತಾಲೂಕಾಧ್ಯಕ್ಷ ಸುದೀಪ ಗಡಾದ, ಶಿವಯೋಗಿ ಹಿರೇಮಠ, ರವಿ ಜಾಲಗಾರ, ಶರಣಪ್ಪ ಲಕ್ಕುಂಡಿ, ಈರಪ್ಪ ಹೆಬಸೂರ, ಅಭಿಲಾಷ ಗುಜಮಾಗಡಿ, ಲಕ್ಷ್ಮಣ ಗೌಡರ, ಪರಶುರಾಮ ಆಡಿನ, ಮಹಾಂತೇಶ ಹೊನ್ನಪ್ಪನವರ, ಸದಾನಂದಸಿಂಗ್ ಗುರ್ಲಹೊಸುರ, ಅಟೋ ಸೇನಾ ನಗರಾಧ್ಯಕ್ಷ ಮೌನೇಶ ದಾಸರ, ಮಂಜು ಗುಡಿಮನಿ, ಸಚಿನ ಮುಸಂಡಿ, ಶಿವು ದಂಡಿನ, ಪ್ರವೀಣ ಕೊಳ್ಳಿ, ಶಿವಕುಮಾರ ಹಿರೇಮಠ, ಬಸವರಾಜ ಹುಲಕೋಟಿ, ಈರಣ್ಣ ಗಾಣೀಗೇರ, ಶಿವನಂದಿ ಮುಂತಾದವರು ಧರಣಿಗೆ ಸಾಥ್ ನೀಡಿದರು.

## ಉಚಿತ ಆರೋಗ್ಯ ಯೋಗ ತರಬೇತಿ ಶಿಬಿರ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶಾಲೆ ಗದಗ ಸಂಸ್ಥೆಯ ಸುವರ್ಣ ಮಹೋತ್ಸವ ಆಚರಣೆ ಪ್ರಯುಕ್ತ ಗದಗ ಜಿಲ್ಲೆಯಾದ್ಯಂತ ಗದಗ ಶಹರ ಮತ್ತು ಗ್ರಾಮೀಣ ವಲಯದಲ್ಲಿನ ಕಾರ್ಯನಿರತ ವಿವಿಧ ಯೋಗ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಸೂಕ್ತವಾದ ಬೇರೆ ಬೇರೆ ಸ್ಥಳಗಳಲ್ಲಿ ಮೇ 12ರಿಂದ ಒಂದು ವಾರ ಪ್ರತಿದಿನ ಬೆಳಿಗ್ಗೆ 6ರಿಂದ 7.10ರವರೆಗೆ ಉಚಿತ ಆರೋಗ್ಯ-ಯೋಗ ತರಬೇತಿ ಶಿಬಿರ ಏರ್ಪಡಿಸಲಾಗಿದೆ.

ಶಿಬಿರಗಳು ಮುಖ್ಯವಾಗಿ ಸ್ಥಳೀಯ ಮುನ್ಸಿಪಲ್ ಮೈದಾನ, ಕಾಶೀವಿಶ್ವನಾಥ ಸಮುದಾಯ ಭವನ ವಿವೇಕಾನಂದ ನಗರ, ವೀರಭದ್ರೇಶ್ವರ ದೇವಸ್ಥಾನ ಬಸವೇಶ್ವರ ನಗರ, ತೋಂಟ-ದಾರ್ಯ ಮಠದಲ್ಲಿನ ಶಿವಾನುಭವ ಮಂಟಪ, ಓಂಕಾರೇಶ್ವರ ಹಿರೇಮಠ ಆದಿತ್ಯನಗರ, ನೀಲಕಂಠೇಶ್ವರಮಠ ಬೆಟಗೇರಿ, ಶ್ರೀನಿವಾಸ ಭವನ ಮತ್ತು ಮುಳಗುಂದ, ಮುಂಡರಗಿ, ಅಂತೂರ-ಬೆಂತೂರ, ಹುಲಕೋಟಿ, ನೀಲಗುಂದ, ಕೋಟುಮಚಗಿ, ಪಾಪನಾಶಿ, ಅಬ್ಬಿಗೇರಿ ಇನ್ನಿತರೆ




ಒಟ್ಟು 25 ಸ್ಥಳಗಳಲ್ಲಿ ಏಕಕಾಲಕ್ಕೆ ನಡೆಯಲಿವೆ.

ಆಸಕ್ತರು ತಮಗೆ ಅನುಕೂಲಕರವಾದ ಸ್ಥಳಗಳಲ್ಲಿನ ಶಿಬಿರದಲ್ಲಿ ಪಾಲ್ಗೊಂಡು ಹೆಚ್ಚಿನ ಪ್ರಯೋಜನ ಪಡೆಯಲು ಕೋರಿದೆ. ಶಿಬಿರದಲ್ಲಿ ಪಾಲ್ಗೊಂಡ ಶಿಬಿರಾರ್ಥಿಗಳೆಲ್ಲರೂ ಮೇ. 19ರಂದು ಬೆಳಿಗ್ಗೆ 10.30 ಗಂಟೆಗೆ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪ, ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದಲ್ಲಿ ನಡೆಯುವ ಎಸ್.ವಾಯ್.ಬಿ.ಎಂ.ಎಸ್ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸುವರ್ಣ ಮಹೋತ್ಸವ ಸಮಿತಿ ಅಧ್ಯಕ್ಷ ಎಸ್. ಎಸ್. ಪಟ್ಟಣಶೆಟ್ಟಿ, ಕಾರ್ಯದರ್ಶಿ ಕೆ.ಎಸ್. ಪಲ್ಲೇದ ವಿನಂತಿಸಿದ್ದಾರೆ.

## ಹೇಮರಡ್ಡಿ ಮಲ್ಲಮ್ಮ ತಾಯಿಯ ಭಾವಚಿತ್ರ ಮೆರವಣಿಗೆ



ಡಂಬಳ ಗ್ರಾಮದ ಆರಾಧ್ಯ ದೇವತೆ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ತಾಯಿ 603ನೇ ಜಯಂತ್ಯೋತ್ಸವ ಅಂಗವಾಗಿ ಹೇಮರಡ್ಡಿ ಮಲ್ಲಮ್ಮ ತಾಯಿ ಅವರ ಭಾವಚಿತ್ರ ಮೆರವಣಿಗೆ ಶನಿವಾರ ವಿಜೃಂಭಣೆಯಿಂದ ನಡೆಯಿತು.

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮದ ಆರಾಧ್ಯ ದೇವತೆ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ತಾಯಿಯ 603ನೇ ಜಯಂತ್ಯುತ್ಸವದ ಅಂಗವಾಗಿ ಹೇಮರಡ್ಡಿ ಮಲ್ಲಮ್ಮ ತಾಯಿಯವರ ಭಾವಚಿತ್ರ ಮೆರವಣಿಗೆ ಶನಿವಾರ ವಿಜೃಂಭಣೆಯಿಂದ ನಡೆಯಿತು.

ಗ್ರಾಮದ ಕಪ್ಪತ್ತಮಲೇಶ್ವರ ಟ್ರಸ್ಟ್ ಕಮಿಟಿ, ಹೇಮರಡ್ಡಿ ಮಲ್ಲಮ್ಮ ಸೇವಾ ಸಮಿತಿಯ ಸಹಯೋಗದಲ್ಲಿ ಹೇಮರಡ್ಡಿ ಮಲ್ಲಮ್ಮ ದೇವಾಸ್ಥಾನದಿಂದ ಆರಂಭವಾದ ಭಾವಚಿತ್ರ ಮೆರವಣಿಗೆ ಮುಖ್ಯ ಬಜಾರ, ಮಾಯಮ್ಮ ದೇವಿ, ಬಡಾವಣೆ ಬಸ್ ನಿಲ್ದಾಣ, ತೋಂಟದಾರ್ಯ ಮಠದ ಮುಂಭಾಗದಿಂದ ಬಸವಣ್ಣ ವೃತ್ತದ ಮಾರ್ಗವಾಗಿ ಸ್ವಸ್ಥಾನಕ್ಕೆ ಆಗಮಿಸಿತು.

ಗ್ರಾಮದ ನೂರಾರು ಮಹಿಳೆಯರು ಮತ್ತು ಯುವತಿಯರು ಕುಂಭ ಹೊತ್ತು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಜಯಂತಿ ನಿಮಿತ್ತ ಪ್ರಸಾದ ವಿತರಣೆ ಮಾಡಲಾಯಿತು. ಗ್ರಾಮದ ಕಪ್ಪತ್ತಮಲೇಶ್ವರ ಟ್ರಸ್ಟ್ ಕಮಿಟಿ, ಹೇಮರಡ್ಡಿ ಮಲ್ಲಮ್ಮ ಸೇವಾ ಸಮಿತಿ ಸರ್ವ ಸದಸ್ಯರ ಸಹಯೋಗದಲ್ಲಿ ಮೆರವಣಿಗೆ ಆಯೋಜಿಸಲಾಗಿತ್ತು.

# ಪಾಕಿಸ್ತಾನ ಠುಸ್ ಪಟಾಕಿ



■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ನಾವು ಮನಸು ಮಾಡಿದರೆ ಎರಡೇ ದಿನದಲ್ಲಿ ಪಾಕಿಸ್ತಾನವನ್ನು ಸರ್ವನಾಶ ಮಾಡಬಹುದು. ಪಾಕಿಸ್ತಾನದವರ ಬಳಿ ಏನೂ ಇಲ್ಲ, ಅದು ಠುಸ್ ಪಟಾಕಿ ಇದ್ದಂತೆ ಎಂದು ಸಚಿವ ಜಮೀರ್ ಅಹ್ಮದ್ ಹೇಳಿದ್ದಾರೆ.

ಕಲಬುರಗಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಾ, ನೀವು ದೇಶಕ್ಕಾಗಿ ಏನು ಮಾಡುತ್ತೀರಿ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಒಂದೇ ಒಂದು ಅವಕಾಶ ಕೊಟ್ಟರೆ ನಾನು ಸೂಸೈಡ್ ಬಾಂಬ್ ಹಾಕಿಕೊಂಡು ಪಾಕಿಸ್ತಾನಕ್ಕೆ ಹೋಗಲು ಸಿದ್ಧ. ಪಾಕಿಸ್ತಾನ ಒಂದು ಖಾಲಿ ಡಬ್ಬ, ಠುಸ್ ಪಟಾಕಿಯಂತಿದೆ. ನಮ್ಮ ದೇಶಕ್ಕಾಗಿ ನಾನು ಏನು ಬೇಕಾದರೂ ಮಾಡಲು ಸಿದ್ಧ ಎಂದು ಹೇಳಿದರು.

ಈಗಾಗಲೇ ಆಪರೇಷನ್ ಸಿಂಧೂರ ಕಾರ್ಯಾಚರಣೆ ಯಶಸ್ವಿ ಆಗಲಿ ಎಂದು ಶುಕ್ರವಾರ ನಾವು ಮಸೀದಿಗಳಲ್ಲಿ ಪ್ರಾರ್ಥನೆ ಮಾಡಿದ್ದೇವೆ. ದೇಶಕ್ಕೋಸ್ಕರ ನಾವು ಏನು ಮಾಡಿದರೂ ಕಡಿಮೆ. ಕೇಂದ್ರ ಸರ್ಕಾರ ಉತ್ತಮ ನಿರ್ಧಾರವನ್ನು ತೆಗೆದುಕೊಂಡಿದೆ ಎಂದು ಹೇಳಿದರು.

# ಭಯೋತ್ಪಾದನೆಯ ವಿರುದ್ಧ ನಿರಂತರ ಹೋರಾಟ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಧಾನಸೌಧದಲ್ಲಿ ಕಂದಾಯ ಮತ್ತು ಗೃಹ ಇಲಾಖೆ ಅಧಿಕಾರಿಗಳೊಂದಿಗೆ ಸಭೆಯ ನಂತರ ಸುಡಿಸ್ಗೋಷ್ಠಿ ನಡೆಸಿ ಮಾತಾಡಿದ ಸಿಎಂ ಸಿದ್ದರಾಮಯ್ಯ, ಯುದ್ಧ ವಿರಾಮ ಘೋಷಣೆಯಾಗಿದೆ ಎಂದು ಸರ್ಕಾರ ಏನೂ ಕೈಕಟ್ಟಿ ಕೂರುವುದಿಲ್ಲ. ಭಯೋತ್ಪಾದನೆಯ ವಿರುದ್ಧ ಹೋರಾಟ ಮಾಡುವುದು ನಮ್ಮ ಗುರಿ ಎಂದು ಹೇಳಿದರು.

ರಾಜ್ಯದಲ್ಲಿದ್ದ ಎಲ್ಲ ಪಾಕಿಸ್ತಾನೀಯರನ್ನು ವಾಪಸ್ಸು ಕಳುಹಿಸಲಾಗಿದೆ. ಅದರೆ, ಮೈಸೂರಲ್ಲಿ 6 ವರ್ಷದೊಳಗಿನ ಮೂರು ಮಕ್ಕಳು ಉಳಿದುಕೊಂಡು ಬಿಟ್ಟಿವೆ. ಅವರ ತಂದೆ ಪಾಕಿಸ್ತಾನಿ ಮತ್ತು ತಾಯಿ ಮೈಸೂರಿನವರು. ಅವರನ್ನು ಬಾರ್ಡರ್‌ವರೆಗೆ ಕರೆದೊಯ್ಯಲಾಗಿತ್ತು. ಅದರೆ ಪಾಕಿಸ್ತಾನದೊಳಗೆ ಕರೆದೊಯ್ಯಲು ಯಾರೂ ಬಾರದ ಕಾರಣ ವಾಪಸ್ಸು ತರಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ತಿಳಿಸಿದರು.

# ಭಾರತ-ಪಾಕಿಸ್ತಾನ ಸಂಘರ್ಷ ಕುರಿತು ವಾಸ್ತವ ವರದಿ ಪ್ರಕಟಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತ ಮತ್ತು ಪಾಕಿಸ್ತಾನ ನಡುವೆ ಉದ್ವಿಗ್ನ ಪರಿಸ್ಥಿತಿ ಸೃಷ್ಟಿಯಾಗಿರುವ ಹಿನ್ನೆಲೆ, ಮಾಧ್ಯಮಗಳು ವಾಸ್ತವಿಕ ಮತ್ತು ಜವಾಬ್ದಾರಿಯುತ ವರದಿ ಮಾಡಬೇಕಾದ ಅಗತ್ಯವನ್ನು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಒತ್ತಿ ಹೇಳಿದ್ದಾರೆ.

ವೈಷ್ಣವ್ ಅವರು ಮುದ್ರಣ ಮಾಧ್ಯಮಗಳ ಅಥವಾ ಪ್ರಮುಖ ಪತ್ರಿಕೆಗಳ ಹಿರಿಯ ಸಂಪಾದಕರೊಂದಿಗೆ ಶುಕ್ರವಾರ (ಮೇ.9) ಚರ್ಚೆ ನಡೆಸಿದ್ದು, ಭಾರತ-ಪಾಕಿಸ್ತಾನ ನಡುವಿನ ಸಂಘರ್ಷಕ್ಕೆ ಸಂಬಂಧಿಸಿದ ಮಾಹಿತಿಗಾಗಿ ಪರಿಶೀಲಿಸದ ಮೂಲಗಳನ್ನು ಅವಲಂಬಿಸದಂತೆ ಮನವಿ ಮಾಡಿದ್ದಾರೆ ಎಂದು ವರದಿ ಮಾಡಿದೆ.


ರಕ್ಷಣಾ ಕಾರ್ಯಾಚರಣೆಗಳು ಮತ್ತು ಭದ್ರತಾ ಪಡೆಗಳ ಚಲನವಲನಗಳ ನೇರ ಪ್ರಸಾರ ಅಥವಾ ನೈಜ-ಸಮಯದ ವರದಿ ಮಾಡುವುದನ್ನು ತಡೆಯುವಂತೆ ಸಚಿವರು ಎಲೆಕ್ಟ್ರಾನಿಕ್ ಮಾಧ್ಯಮಗಳಿಗೆ ಸಲಹೆ ನೀಡಿದ್ದಾರೆ ಎಂದು ವರದಿ ತಿಳಿಸಿದೆ.

ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವಾಲಯ ಹೊರಡಿಸಿದ ಸಲಹೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅವರು ಮಾಧ್ಯಮ ಪ್ರತಿನಿಧಿಗಳಿಗೆ ಮನವಿ ಮಾಡಿದ್ದಾರೆ.

ಭಾರತೀಯ ಸಶಸ್ತ್ರ ಪಡೆಗಳು ತೆಗೆದುಕೊಂಡ ಕ್ರಮ ಭಯೋತ್ಪಾದನೆಯ ವಿರುದ್ಧವೇ ಹೊರತು, ಯಾವುದೇ ದೇಶ ಅಥವಾ ಸಮುದಾಯದ ವಿರುದ್ಧವಲ್ಲ ಎಂದು ವೈಷ್ಣವ್ ಸ್ಪಷ್ಟಪಡಿಸಿದ್ದಾರೆ ಎಂದು ವರದಿ ಹೇಳಿದೆ.

**ಮಮತೆಯ ಮಾತೆಯ ಸ್ಮರಿಸುವ 'ಅಮ್ಮಂದಿರ ದಿನ'ದ ನಿಮಿತ್ತ ವಿಶೇಷ ಲೇಖನ**

# ತಾಯಿ ನಮ್ಮೆಲ್ಲರ ಜೀವಂತ ಅಸ್ಮಿತೆ



ದೇವರು ನಮಗೆ ನೀಡಿದ ಶ್ರೇಷ್ಠ ಸಂಪತ್ತು ತಾಯಿ. ಎಲ್ಲಾ ದೇವರಿಗಿಂತ ಮಿಗಿಲು ನೀವು. ತಾಯಿಯ ಪ್ರೀತಿಯ ನೆರಳು ಉಸಿರು ನೀಡಿದ ದೇವರು ನೀವು. ಸುಂದರ ಬದುಕಿನ ಮಾರ್ಗದರ್ಶಿ ನೀವು. ಅಮ್ಮ, ನೀವಿಲ್ಲದೆ ಜಗವೇ ಇಲ್ಲ. ಹೌದು ಹೀಗೆ ತಾಯಿಯನ್ನು ಎಷ್ಟು ವರ್ಣಿಸಿದರೂ ಸಾಲದು. ಅಮ್ಮ ಎಂಬ ಮಾತೇ ಅಮೃತ. ಅಮ್ಮನ ಪ್ರೀತಿಯೇ ಸಂಜೀವಿನಿ. ಅಮ್ಮ ಎಂದರೆ ವಾತ್ಸಲ್ಯದ ಮೂರ್ತಿ. ಹಾಗಾಗಿ ತಾಯಿ ಪ್ರೀತಿಗೆ ಕೊನೆಯ ಇಲ್ಲ.

ತಾಯಿಯೇ ಮೊದಲ ಗುರು, ಮನೆಯೇ ಮೊದಲ ಪಾಠ ಶಾಲೆ ಎಂಬಂತೆ ಮನೆಯಲ್ಲಿ ಮಗು ಮೊದಲು ನುಡಿವ ಶಬ್ದ 'ಅಮ್ಮ'. ಕಿರಿಯರಿಂದ ಹಿಡಿದು ಹಿರಿಯರವರೆಗೆ ಅಕ್ಕರೆಯ, ಸಕ್ಕರೆಯ ಪದ 'ಅಮ್ಮ'. ಅಮ್ಮ ಎನ್ನುವ ಪದ ನಮ್ಮ ಮನವನ್ನು ರೋಮಾಂಚನಗೊಳಿಸುತ್ತದೆ. ಆಕಸ್ಮಾತ್ ನಮಗೇನಾದರೂ ಆಘಾತ ಅಥವಾ ನೋವುಂಟಾದಾಗ 'ಅಮ್ಮಾ....!' ಎನ್ನುತ್ತೇವೆ ವಿನಃ ಅಪ್ಪಾ, ಅಜ್ಜಿ, ಅಜ್ಜ ಎಂದೂ ಕರೆಯುವುದಿಲ್ಲ. ಇದು ಸಮಾಜದ ಸಹಜ ಸಂಗತಿ. ಹಾಗಾಗಿ ಮನುಸ್ಮೃತಿಯಲ್ಲಿ ತಾಯಿಯ ಕುರಿತಾದ ಸಂಸ್ಕೃತ ನುಡಿಮುತ್ತು ಹೀಗಿದೆ-

**ಉಪಾಧ್ಯಾಯಾನ್ ದಶಾಚಾರ್ಯ;**
**ಆಚಾರ್ಯಾಣಾಂ ಶತಂಪಿತಾ ।**
**ಸಹಸ್ರಂತು ಪಿತೃನ್ ಮಾತಾ;**
**ಗೌರವೇಣಾತಿಲಚ್ಯತೇ ।**

ಅರ್ಥಾತ್, ಶಿಕ್ಷಕನಿಗಿಂತ ಹತ್ತುಪಟ್ಟು ಗುರುವೂ, ಗುರುವಿಗಿಂತ ನೂರುಪಟ್ಟು ತಂದೆ-ಯೂ, ತಂದೆಗಿಂತ ಸಾವಿರಪಟ್ಟು ತಾಯಿಯೂ ಗೌರವಕ್ಕೆ ಪಾತ್ರಳಾಗಿರುತ್ತಾಳೆ ಎಂದು ಅವಳ ಕುರಿತು ಹೇಳಿದ ಮಾತು ಅಕ್ಷರಶಃ ಸತ್ಯ. ಸದಾ ನನ್ನೊಂದಿಗೆ ಇರುವ ದೇವರಿಗೆ ಹೊಗಳಲು ಪದಗಳಿಗೆ ಸಿಗದ ಮಾತೃ ಹೃದಯ ಅವಳದು. ಜೀವನದ ಆರಂಭದಲ್ಲಿ ಬದುಕಿಗೆ ಯಾವುದೇ ಮಾರ್ಗಸೂಚಿ ಇರುವುದಿಲ್ಲ. ಆ ಸಮಯದಲ್ಲಿ ಬದುಕಿಗೆ ದಾರಿ ತೋರುವವಳು ತಾಯಿಯೊಬ್ಬಳೇ. ಅದಕ್ಕಾಗಿ 'ನನ್ನಮ್ಮ ನನ್ನ ಬದುಕಿನ ಮಾರ್ಗದರ್ಶಿ'. ಹಾಗಾಗಿ ಅಮ್ಮನ ನೆನಪಿಗೆ, ಅಮ್ಮನಿಗೆ ಮೀಸಲಿಟ್ಟ ಗೌರವದ ದಿನವಾಗಿ ಭಾರತ ಹಾಗೂ ಇತರೆ ದೇಶಗಳಲ್ಲಿ ಹುಟ್ಟಿಕೊಂಡಿದ್ದೇ 'ತಾಯಿಯ ದಿನ'. ಈ ದಿನವನ್ನು ಪ್ರತಿವರ್ಷ ಮೇ ತಿಂಗಳ ಎರಡನೇ ಭಾನುವಾರದಂದು ಆಚರಿಸಲಾಗುತ್ತದೆ. ಈ ವರ್ಷ ಮೇ 11ರಂದು ಬಂದಿದೆ. ಈ ದಿನ ಅಮ್ಮಂದಿರ ಮತ್ತು ಅವರ ತಾಯ್ತನದ ಮಹತ್ವವನ್ನು ತಿಳಿಸುವ ಕಾರ್ಯ ಮಾಡಲಾಗುತ್ತಿದೆ.

'ಜಗತ್ತಿನಲ್ಲಿ ಕೆಟ್ಟ ಮಕ್ಕಳು ಇರುತ್ತಾರೆ; ಆದರೆ ಕೆಟ್ಟ ತಾಯಿ ಇರಲು ಸಾಧ್ಯವಿಲ್ಲ' ಎಂಬುದಾಗಿ ಶಾಸ್ತ್ರಜ್ಞರು ಹೇಳುತ್ತಾರೆ. ಅದುವೇ ತಾಯಿಯ ಶ್ರೇಷ್ಠತೆ ಮತ್ತು ಭವ್ಯತೆ. ತನ್ನ ಕನಸುಗಳನ್ನು ಮರೆತು ಸುಖವನ್ನು ತ್ಯಾಗ ಮಾಡಿ ಆಕೆ ಮಕ್ಕಳ ಸಂತೋಷವನ್ನೇ ತನ್ನದಾಗಿ ಮಾರ್ಪಡಿಸಿಕೊಳ್ಳುತ್ತಾಳೆ. ಉಪ್ಪಿಗಿಂತ ರುಚಿಯಿಲ್ಲ, ತಾಯಿಗಿಂತ ಬಂಧುವಿಲ್ಲ ಎಂಬ ಗಾದೆಯಂತೆ ಯಾವುದೇ ಪದಾರ್ಥಕ್ಕೆ ಉಪ್ಪಿಲ್ಲದಿದ್ದರೆ ಹೇಗೆ ರುಚಿಯಿರುವುದಿಲ್ಲವೊ ಅದೇ ರೀತಿ ತಾಯಿಗಿಂತ ಮಿಗಿಲಾದ ಸ್ನೇಹಿತರು ಹಾಗೂ ಬಾಂಧವರು ಇರುವುದಿಲ್ಲ.

ನಾವು ತಾಯಿಗೆ ಸದಾ ಒಂದು ಉನ್ನತ ಸ್ಥಾನವನ್ನು ಕೊಡಬೇಕು, ಅವಳನ್ನು ಗೌರವಿಸಬೇಕು ಮತ್ತು ಆರಾಧಿಸಬೇಕು. ಎಂದಿಗೂ ಅವಳನ್ನು ನಾವು ನಿಂದಿಸಬಾರದು, ಅವಳ ಮಾತೃ ಹೃದಯಕ್ಕೆ ನೋವನ್ನುಂಟುಮಾಡಬಾರದು. ಅವಳಲ್ಲಿ ಅಸೂಯೆ, ಸ್ವಾರ್ಥ ಇರುವುದಿಲ್ಲ. ಹೀಗೆ ನಾವು ಅಮ್ಮನ ನಿಜವಾದ ಪ್ರೀತಿಯನ್ನು, ಅವಳ ಕಾತುರತೆಯನ್ನು ಅರ್ಥಮಾಡಿಕೊಂಡು ನಮಗಾಗಿ, ನಮ್ಮ ಒಳಿತಿಗಾಗಿ ಸದಾ ಚಿಂತಿಸುವ ಆ ಮಾತೃ ಹೃದಯಕ್ಕೆ ಸಂತೋಷ ಉಣಿಸುವುದೇ ಮಕ್ಕಳ ಕರ್ತವ್ಯವಾಗಬೇಕೇ ವಿನಃ ದುಃಖ ನೀಡಬಾರದು. ಅವಳಲ್ಲಿ ವಿಶಾಲವಾದ ಮನೋಭಾವನೆಯಿದೆ. ಇವಳು ತ್ಯಾಗಮಯಿ, ಕರುಣಾಮಯಿ ಹಾಗೂ ಕ್ಷಮಯಾಧರಿತ್ರಿ. ಇಂತಹ ಎಲ್ಲಾ ಗುಣಗಳನ್ನು ಯಾವ ಸಂಬಂಧದಲ್ಲಿಯೂ ಕಾಣಿಸುವುದಿಲ್ಲ ಹಾಗೂ ಕಾಣಲಾಗುವುದಿಲ್ಲ. ಇಂದು ನಾವಿರುವ ಸ್ಥಿತಿಗೆ ಅವಳ ಆಸರೆ, ಅಕ್ಕರೆ ಮತ್ತು ಪ್ರೋತ್ಸಾಹವೇ ಕಾರಣ. ಅಮ್ಮನಲ್ಲಿ ಎಳ್ಳಷ್ಟೂ ಮತ್ಸರ, ದ್ವೇಷ ಮತ್ತು ಅಸೂಯೆಯಿಲ್ಲದೆ ಪ್ರತಿ ಕ್ಷಣವೂ ತನ್ನ ಮಗುವಿಗಾಗಿ ಹಾತೊರೆಯುತ್ತಾಳೆ. ಇಂತಹ ಅಮೂಲ್ಯವಾದ ಜೀವಕ್ಕೆ ನಾವು ಎಷ್ಟು ಋಣಿಯಾಗಿದ್ದರೂ ಸಾಲದು.

ಒಟ್ಟಾರೆಯಾಗಿ ಈ ದಿನ ಬಂದೊಡನೆಯೇ ಇಂದು ನಾವು ಅಮ್ಮನಿಗಾಗಿ ಏನು ಮಾಡಬೇಕು, ಆ ದಿನದಂದು ಅವಳನ್ನು ಹೇಗೆ ಸಂತಸಪಡಿಸಬೇಕು, ಅವಳಿಗೆ ಏನು ಕೊಡಬೇಕು ಎಂಬ ಪ್ರಶ್ನೆಗಳು ನಮ್ಮನ್ನು ಕಾಡುತ್ತವೆ. ಆದರೆ, ಎಲ್ಲಾ ದಿನಗಳು ಅಮ್ಮನ ದಿನ ಏಕಾಗಬಾರದು, ಅಲ್ಲವೇ? ಅದೇ ನೋಡಿ ವಿಪರ್ಯಾಸ! ಅಂದು ಮಾತ್ರ ನಮಗೆ ಅವಳ ಮೇಲೆ ಎಲ್ಲಿಲ್ಲದ ಪ್ರೀತಿ, ಅವಳಿಗೆ ಮೆಚ್ಚುವಂತಹ ಕೊಡುಗೆಗಳು! ಅಬ್ಬಾ ಬೇಡ, ಅಂದು ಅಮ್ಮನನ್ನು, 'ಅಮ್ಮಾ ನೀನು ಏನೂ ಮಾಡಬೇಡ, ಇಂದು ಹಾಯಾಗಿ ಕುಳಿತುಕೋ' ಎಂದು ಮನೆಯಲ್ಲಿ ಮಕ್ಕಳು ಇನ್ನಿಲ್ಲದ ಮಾತುಗಳಿಂದ ಅವಳನ್ನು ಹೊಗಳಿ ಅಟ್ಟಕ್ಕೇರಿಸುತ್ತಾರೆ. ಈಗ ಹೇಳಿ, ಇಂತಹ ಕಾಳಜಿ ಪ್ರತಿ ದಿನ ಮಕ್ಕಳು ಆ ತಾಯಿಯ ಮೇಲೆ ತೋರಿಸಿದರೆ ಆ ಮಹಾ ತಾಯಿ ಎಷ್ಟು ಸಂತಸ ಪಡುತ್ತಾಳೆ ಗೊತ್ತೆ! ಆಗ ಪ್ರತಿದಿನ ಅಮ್ಮನ ದಿನವೇ ಆಗಿರುತ್ತದೆ. ಅದಕ್ಕೆಂದು ಮೀಸಲಿಡುವ ದಿನವೇ ಆಗಬೇಕಾಗಿಲ್ಲ.



ಅಮ್ಮ, ಒಂದು ಮಗುವಿಗೆ ತಾಯಿಯಾಗಿ, ಗುರುವಾಗಿ ಮತ್ತು ಸ್ನೇಹಿತೆಯಾಗಿ ಆ ಮಗುವಿನ ಸರ್ವತೋಮುಖ ಬೆಳವಣಿಗೆಯಲ್ಲಿ ಪಾತ್ರಳಾಗುತ್ತಾಳೆ ಎನ್ನುವ ಲೋಕಾರೂಢಿಯೂ ಹೌದು ನಿಜವೂ ಹೌದು.

**- ಬಸವರಾಜ ಎಮ್.ಯರಗುಪ್ಪಿ.**
ರಾಮಗೇರಿ, ಲಕ್ಷ್ಮೇಶ್ವರ.

**ಇಂದು 'ವಿಶ್ವ ಅಮ್ಮಂದಿರ ದಿನ'ದ ನಿಮಿತ್ತ ವಿಶೇಷ ಲೇಖನ**

# ಮಮತೆಯ ಮೂರುತಿ ಅಮ್ಮ



ಅಮ್ಮ ಎಂದರೆ ಅಮ್ಮ. ಅಮ್ಮನ ಜಾಗ ಬದಲಿ ಇಲ್ಲವೇ ಇಲ್ಲ. ಹಾಗಿದ್ದರೂ ಈ ತಂತ್ರಜ್ಞಾನ ಯುಗದ ಅಮ್ಮಂದಿರು ಮಕ್ಕಳ ಜೀವನದಲ್ಲಿ ತಮ್ಮ ಅನುಪಸ್ಥಿತಿ, ಸಮಯದ ಅಭಾವವನ್ನು ಸರಿದೂಗಿಲು ಭೌತಿಕ ಸೌಕರ್ಯಗಳನ್ನು, ಅನುಕೂಲಗಳನ್ನು ತುಂಬಿಕೊಡುವ ಪ್ರಜ್ಞೆ ಹೆಚ್ಚುತ್ತಿದೆ. ಇದರಿಂದ ಮಕ್ಕಳ ಭಾವನಾತ್ಮಕ ಬೌದ್ಧಿಕ ಹಾಗೂ ಸಾಮಾಜಿಕ ಬೆಳವಣಿಗೆಯನ್ನು ಇದು ಪ್ರಭಾವಿಸುತ್ತದೆ. ಮಕ್ಕಳ ಮನಸ್ಸಿನಲ್ಲಿ ಆತ್ಮೀಯತೆ, ಸಹನೆ, ಮಮಕಾರಗಳಂತಹ ಭಾವನಾತ್ಮಕ ಬೆಸುಗೆಯ ಜಾಗದಲ್ಲಿ ಒಂಟಿತನ, ಮೊಬೈಲ್‌ಗಳಿಗೆ ಸ್ಥಳಾವಕಾಶ ಪಡೆದಾಗ ಅದು ಹೇಗೆ ಮಕ್ಕಳ ಮನಸ್ಸು ಪವಿತ್ರತೆಯ ಭಾವ ಪಡೆಯಲು ಸಾಧ್ಯ? ಬದಲಾಗಿ ಮಕ್ಕಳಲ್ಲಿ ಒಂಟಿತನ, ಅತೃಪ್ತಿ, ಜಡತ್ವ, ಬೇಸರ, ಒತ್ತಡಗಳು ಹೆಚ್ಚುತ್ತವೆ.

ಒಬ್ಬ ತಾಯಿಯಾಗಿ ತಾನು ಸರಿಯಾಗಿ ಜವಾಬ್ದಾರಿ ನಿರ್ವಹಿಸುತ್ತಿಲ್ಲ, ಮಕ್ಕಳೊಂದಿಗೆ ಸಾಕಷ್ಟು ಸಮಯ ಕಳೆಯುತ್ತಿಲ್ಲ ಎನ್ನುವ ಅರಿವು ತಾಯಿಯಂದಿರ ಮನದಲ್ಲಿ ಅರಳಬೇಕು. ಜ್ಞಾನೋದಯವಾಗಬೇಕು, ತಿಳಿದುಕೊಳ್ಳಬೇಕು. ಜೀವನ ಸಾಗಿಸಲು ದುಡಿಮೆ ಮುಖ್ಯ. ಆದರೆ ಮಕ್ಕಳ ಜೀವನಕ್ಕಿಂತ ಹೆಚ್ಚೇನೂ ಅಲ್ಲ. ಕಳೆದುಕೊಂಡ ಮೇಲೆ ಉದ್ಯೋಗಸ್ಥ ಮಹಿಳೆಯರು, ತಾಯಿಯಂದಿರರು, ತಪ್ಪಿತಸ್ಥ ಭಾವನೆಗಳನ್ನು ಕಡಿಮೆ ಮಾಡಲು ಆಗುತ್ತದೆಯೇ? ಅಪರಾಧಿ ಭಾವದಿಂದ ತಪ್ಪಿಸಿಕೊಳ್ಳಲು ಮಕ್ಕಳಿಗೆ ಎಲ್ಲ ರೀತಿಯ ಭೌತಿಕ, ಜಡತ್ವವಾದ ಹಾಗೂ ಪ್ರಾಪಂಚಿಕ ವಸ್ತುಗಳನ್ನು ತುಂಬಿಕೊಡುತ್ತಾಳೆ, ಅದು ಮಗುವಿನ ಬೆಳವಣಗೆಡಗೆ ಎಷ್ಟು ಪೂರಕ, ಎಷ್ಟು ಅಗತ್ಯ ಎನ್ನುವುದನ್ನು ಗಮನಿಸಬೇಕಾಗಿದೆ.

ಮಕ್ಕಳ ಸಂಬಂಧಗಳಿಗಿಂತ ವಸ್ತುಗಳಿಗೆ, ಹಣಕ್ಕೆ, ಅಧಿಕಾರಕ್ಕೆ ಹೆಚ್ಚು ಪ್ರಾಧಾನ್ಯತೆ ನೀಡುವ ಹೆತ್ತವರು, ಐಷಾರಾಮಿ ವಸ್ತುಗಳನ್ನು, ಸವಲತ್ತುಗಳನ್ನು ತುಂಬಿಕೊಳ್ಳುವ ಪ್ರವೃತಿ ಮನಗಳಲ್ಲಿ ತುಂಬಿರುತ್ತದೆ. ಇಂದಿನ ಈ ಸೌಕರ್ಯಗಳೊಂದಿಗೆ ಬೆಳೆಯುವ ಮಕ್ಕಳು ಮನೆ ಮಂದಿಯ ಜಾಗಗಳಲ್ಲಿ ಇಂದು ಮೊಬೈಲ್, ಟಿವಿ, ಗ್ಯಾಜೆಟ, ಲ್ಯಾಪ್‌ಟಾಪ್‌ಗಳು ಆಪ್ತ ಸಂಗಾತಿಗಳಾಗಿರುತ್ತವೆ. ಹೆತ್ತವರು ತಮ್ಮ ಮಕ್ಕಳಿಗೆ ಎಷ್ಟೊಂದು ಅನುಕೂಲತೆಗಳನ್ನು ಕೊಟ್ಟಿದ್ದಾರೆಂದರೆ ಒಂದು ನಿಮಿಷ ಮೊಬೈಲ್, ಅದಕ್ಕೆ ನೆಟ್ ಇರಲಿಲ್ಲವೆಂದರೆ, ಬೇಕಾಗಿದ್ದ ವಾಹನ, ಇತರೆ ಅನುಕೂಲತೆಗಳನ್ನು ಕಡಿಮೆಯಾದರೆ ಖಿನ್ನರಾಗುತ್ತಾರೆ. ಮಕ್ಕಳ ನಡುವಳಿಕೆ ಬದಲಾಗಿರುವದನ್ನು ನೋಡಿದರೆ ಭಯವಾಗುತ್ತದೆ.

ಅಮ್ಮ ಅಂದರೆ ಮಮತೆಯ ಪರಿಪೂರ್ಣ ಜೀವನದ ಮಾಗಿದ ಹಣ್ಣು ಇದ್ದಂತೆ. ಅಮ್ಮನೊಂದಿಗೆ ಇರಬಹುದಾದ ಸಲುಗೆಯನ್ನು ಮತ್ಯಾರಿಂದಲೂ ಇಟ್ಟುಕೊಳ್ಳುವುದಿಲ್ಲ ಮಕ್ಕಳು. ಅಪ್ಪನೊಂದಿಗೆ ಮಾತಾಡುವುದಕ್ಕೆ ಅಮ್ಮನ ವಕಾಲತ್ತು ಬೇಕು. ಇದು ಮಕ್ಕಳಲ್ಲಿ ಮನೆ ಮಾಡಿದ ಮಾತು. ಅನೇಕ ಸಲ ಅಮ್ಮನಿಗೂ ಬೇಡವಾಗುವುದಕ್ಕೆ ಅಪ್ಪನೆಂಬ ಗುರಾಣಿಯೇ ಬೇಕು. ನೀನು ಶಾಲೆಗೆ ಹೋಗಲಿಲ್ಲ ಅಂದರೆ ನಿನ್ನ ಅಪ್ಪನಿಗೆ ಹೇಳಿಬಿಡುತ್ತೇನೆ ಎಂದು ತಾಯಿಯ ಮಾತು ಕೇಳಿದ ಮಕ್ಕಳು ಪಾಠಿಚೀಲ ಹೆಗಲಿಗೇರಿಸುತ್ತಾರೆ!

ಮಕ್ಕಳು ಬೆಳೆದಂತೆಲ್ಲ ಯಾವುದೇ ಕೆಲಸಗಳನ್ನು ಮಾಡಬೇಕಾದರೂ ನಿನ್ನ ತಂದೆಗೆ ಒಂದು ಮಾತು ಕೇಳು, ಅವರೇನು ಹೇಳುತ್ತಾರೆ ಕೇಳು ಎನ್ನುವ ತಾಯಿಯ ಮಾತು, ತಂದೆಯ ಮಾತುಗಳು ಬೇಡವಾದಾಗ ತಾಯಿಯ ಮಮತೆ, ತಾಯಿಯ ಪ್ರೀತಿ ತಾಯಿಯ ವಕಾಲತ್ತು ನಡೆಯುತ್ತದೆ. ಅಪ್ಪಾ ನನಗೆ ಅದು ಬೇಕು, ಇದು ಬೇಕು ಎನ್ನುವ ತನ್ನ ಮನಸ್ಸಿನ ಆಸೆಗಳನ್ನು ತನ್ಮೂಲಕವೋ ಇಲ್ಲ ತಾಯಿಯ ಮೂಲವೋ ತರಿಸಿಕೊಳ್ಳುವ ಅಧಿಕಾರ ತಾಯಿಯಿಂದಲೇ ಮಕ್ಕಳು ಪಡೆಯುತ್ತಾರೆ. ಯಾಕೆ? ಒಂಬತ್ತು ತಿಂಗಳು ಹೆತ್ತವಳು ತಾಯಿ, ಪ್ರತಿಕ್ಷಣ ಪ್ರೀತಿಯ ಧಾರೆ ಎರೆದವಳು ತಾಯಿ, ಮಗುವಿನ ಬೇಕು ಬೇಡಗಳನ್ನು ಪೂರೈಸುವ ತ್ಯಾಗಮೂರ್ತಿ ತಾಯಿ. ಅದಕ್ಕಾಗಿಯೇ ಮಕ್ಕಳಿಗೆ ತಾಯಿಯೇ ದೇವರು ಎನ್ನುವ ನಮ್ಮ ಸಂಸ್ಕೃತಿಯೇ ಮೇರು.

ಅಮ್ಮನ ಪ್ರೀತಿ, ಮಮಕಾರ, ತ್ಯಾಗ, ಕರುಣೆ, ಪಾಠ ನಡೆ-ನುಡಿಯನ್ನು ತಿಳಿದುಕೊಳ್ಳುವ ಮಕ್ಕಳು ಮನದಟ್ಟು ಆಗುವ ಹೊತ್ತಿಗೆ ಬದುಕಿನ ಅರ್ಧ ಭಾಗವೇ ಸವೆದು ಹೋಗಿರುತ್ತದೆ. ಅಮ್ಮ ಸುಲಭವಾಗಿ ಅರ್ಥವಾಗುವ ಸುಂದರ ಭಾವಗೀತೆ, ಅಪ್ಪ ತಕ್ಷಣಕ್ಕೆ ಅರ್ಥವಾಗದ ಸುದೀರ್ಘ ಕಥನ ಕವನ, ಮಕ್ಕಳು ಬೆಳೆದಂತೆಲ್ಲ ಹದಿಹರೆಯ ದಾಟಿ ಪ್ರಾಯಪ್ರಬುದ್ಧರಾದ ಮೇಲೆ ಅಮ್ಮ ಅವರನ್ನು ಸ್ನೇಹಿತರಂತೆ ನೊಡಿಕೊಳ್ಳಬೇಕು, ಅದು ಲೋಕರೂಢಿ. ಅಪ್ಪ ಗೆಳೆಯ. ಆದುದರಿಂದಲೇ ಅವನೊಳಗೊಬ್ಬ ಮಾರ್ಗದರ್ಶಕನೂ, ಸಲಹೆಗಾರನೂ ಇರುತ್ತಾನೆ.

ಅಮ್ಮ ಅಮ್ಮನಲ್ಲ, ಮಮತೆಯ ಮೂರುತಿ ಅವಳು. ಒಬ್ಬ ಫ್ರೆಂಡ್, ಗೈಡ್, ಫಿಲಾಸಫರ್ ಆಗಿ ಮಕ್ಕಳ ಜೀವನಕ್ಕೆ ಮೊದಲಿಗಳಾಗಿ ಇರುವ ದೇವರು ತಾಯಿ. ಅಮ್ಮ ಎಂದರೆ ಅಂತರಂಗದಲ್ಲಿ ಸದಾ ಬೆಳಗುತ್ತಿರುವ ಹೊಂಬೆಳಕು. ಆ ಬೆಳಕು ಒಳಗಿನಿಂದಲೇ ಪ್ರಭೆಯನ್ನು ಹೊಮ್ಮಿಸುವ ಮಿಂಚುಹುಳ ಆಗಿರುವುದರಿಂದಲೇ ನಮ್ಮ ವ್ಯಕ್ತಿತ್ವವನ್ನು ಬೆಳಗುತ್ತದೆ. ಭವಿಷ್ಯದ ದಾರಿಯನ್ನು ತೋರಿಸುತ್ತದೆ, ಆ ಬೆಳಕು ಮುಗಿಯುವುದೇ ಇಲ್ಲ. ಎಲ್ಲ ಮಕ್ಕಳ ಪಾಲಿಗೆ ಅಮ್ಮಳ ಪ್ರೀತಿ ಮಮತೆ ಅಕ್ಷಯ ಪಾತ್ರೆಯಾಗಲಿ ಎಂದು ಹಾರೈಸುವೆ.



**- ಡಾ. ತಯಬಅಲಿ ಅ.ಹೊಂಬಳ.**

**ಆಹಾರ ಆಯೋಗ ಕೈಗೊಂಡ ಪ್ರವಾಸದ ಕುರಿತು ಮಾಹಿತಿ ನೀಡಿದ ಆಯೋಗದ ಅಧ್ಯಕ್ಷ ಡಾ.ಎಚ್.ಕೃಷ್ಣ**

# ಅಧಿಕಾರಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕು



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳು ನಿರಂತರವಾಗಿ ಆಸ್ಪತ್ರೆ, ಅಂಗಡಿ, ಆಹಾರ ಉಗ್ರಾಣಗಳಿಗೆ ಭೇಟಿ ನೀಡಿ, ಉತ್ತಮ ಗುಣಮಟ್ಟ, ಸ್ವಚ್ಛತೆ ಹೊಂದಿರುವದನ್ನು ಪರಿಶೀಲಿಸಬೇಕೆಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಎಚ್.ಕೃಷ್ಣ ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಗಂಣದಲ್ಲಿ ಮೇ 6ರಿಂದ 9ರವರೆಗೆ ಜಿಲ್ಲೆಯಲ್ಲಿ ಆಹಾರ ಆಯೋಗ ಕೈಗೊಂಡ ಪ್ರವಾಸದ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿ ಮಾತನಾಡಿದರು.

ಜಿಲ್ಲೆಯಲ್ಲಿರುವ ಕರ್ನಾಟಕ ಆಹಾರ ನಿಗಮದ ಉಗ್ರಾಣಗಳು ಸುರಕ್ಷಿತವಾಗಿಲ್ಲ. ಸ್ವಚ್ಛತೆ, ತಾಂತ್ರಿಕತೆ ಕೊರತೆ ಇದೆ. ಅಧಿಕಾರಿಗಳು ಈ ಕುರಿತು ಗಮನ ಹರಿಸಬೇಕು. ಧಾರವಾಡ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿದಾಗ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ನಿರ್ದೇಶನದ ಮೇರೆಗೆ ಮಾಡಿರುವ ಸೌಲಭ್ಯಗಳ ದಾಸ್ತಾನು ವಹಿ, ಫಲಾನುಭವಿಗಳಿಗೆ ಸೌಲಭ್ಯ ವಿತರಿಸಿದ ವಹಿ, ರೈತರ ಬೇಡಿಕೆ ವಹಿ, ಗಮನಿಸಿ, ಪರಿಶೀಲಿಸಿದಾಗ ಉತ್ತಮ ಮಾಹಿತಿ ಸಂಗ್ರಹವಿದೆ. ಇದೇ ರೀತಿ ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ದಾಖಲಾತಿ ನಿರ್ವಹಿಸಬೇಕೆಂದು ಆಹಾರ ಆಯೋಗದ ಅಧ್ಯಕ್ಷರು ಪ್ರಶಂಸೆ ವ್ಯಕ್ತಪಡಿಸಿದರು.

ಸರ್ಕಾರದ ಕಾರ್ಯಕ್ರಮಗಳು, ಯೋಜನೆಗಳು ಜನರಿಗೆ ತಲುಪಬೇಕಾದರೆ ಅಧಿಕಾರಿ ವರ್ಗದವರು ಸಮರ್ಪಕವಾಗಿ ಕೆಲಸವನ್ನು ನಿರ್ವಹಿಸಬೇಕು. ಅದರ ಬಗ್ಗೆ ಭೇಟಿ ಸಂದರ್ಭದಲ್ಲಿ ನಿರ್ದೇಶನಗಳನ್ನು ನೀಡಿದ್ದೇನೆ. ಅದರ ಜೊತೆಗೆ ಕಂಡುಬಂದ ನ್ಯೂನತೆಗಳನ್ನು ತಕ್ಷಣ ಸ್ಥಳದಲ್ಲಿಯೇ ಸರಿಪಡಿಸಿ, ಮಾರ್ಗದರ್ಶನವನ್ನು ನೀಡಿದ್ದೇವೆ ಎಂದು ಅವರು ಹೇಳಿದರು. ಪ್ರತಿಯೊಂದು ನ್ಯಾಯ ಬೆಲೆ ಅಂಗಡಿಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳ, ಜಾಗೃತ ಸಮಿತಿಯ ಸದಸ್ಯರ, ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರ ಹೆಸರು ಮತ್ತು ದೂರವಾಣಿ ಸಂಖ್ಯೆಗಳ ಫಲಕಗಳನ್ನು ಹಾಕಬೇಕು. ಜನರಿಗೆ ಯಾವುದೇ ನ್ಯಾಯ ಬೆಲೆ ಅಂಗಡಿಗಳಲ್ಲಿ ಏನೇ ತೊಂದರೆಯಾದರೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ, ಅವರು ನಿರ್ಲಕ್ಷ್ಯ ತೋರಿದರೆ ತಮ್ಮನ್ನು ಸಂಪರ್ಕಿಸಬಹುದು ಎಂದು ಹೇಳಿದರು. ಜಿಲ್ಲಾಧಿಕಾರಿ ದಿವ್ಯ ಪ್ರಭು ಸ್ವಾಗತಿಸಿದರು. ಆಹಾರ ಇಲಾಖೆಯ ಜಂಟಿ ನಿರ್ದೇಶಕ ಚನ್ನಬಸಪ್ಪ ಕೊಡ್ಲಿ ಅವರು ಪತ್ರಿಕಾಗೋಷ್ಠಿ ನಿರ್ವಹಿಸಿದರು. ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ. ಬ್ಯಾಕೋಡ, ಕರ್ನಾಟಕ ರಾಜ್ಯ ಆಹಾರ ಆಯೋಗದ ಸದಸ್ಯರುಗಳಾದ ಲಿಂಗರಾಜ ಕೋಟೆ, ಸುಮಂತ ರಾವ್, ಮಾರುತಿ ಎಂ.ದೊಡ್ಡಲಿಂಗಣ್ಣವರ, ರೋಹಿಣಿ ಪ್ರಿಯ, ಕೆ.ಎಸ್. ವಿಜಯಲಕ್ಷ್ಮೀ ವೇದಿಕೆಯಲ್ಲಿದ್ದರು.

> ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸದೆ ಇದ್ದಲ್ಲಿ ಸಾರ್ವಜನಿಕರು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ. ಎಚ್. ಕೃಷ್ಣ (ಮೊ.ಸಂ:944466099), ಸದಸ್ಯರುಗಳಾದ ಲಿಂಗರಾಜ ಕೋಟೆ (ಮೊ.ಸಂ:8105612230), ಸುಮಂತ ರಾವ್ (ಮೊ.ಸಂ:9845875109), ಮಾರುತಿ ಎಂ.ದೊಡ್ಡಲಿಂಗಣ್ಣವರ (ಮೊ.ಸಂ:9945037681), ರೋಹಿಣಿ ಪ್ರಿಯ (ಮೊ.ಸಂ:9845342323), ಕೆ.ಎಸ್.ವಿಜಯಲಕ್ಷ್ಮೀ (ಮೊ.ಸಂ:9663961037), ಸುಜಾತಾ ಡಿ. ಹೊಸಮನಿ (ಮೊ.ಸಂ:9448992005) ಇವರಿಗೆ ಸಂಪರ್ಕಿಸಬಹುದು ಎಂದು ಡಾ. ಎಚ್.ಕೃಷ್ಣ ತಿಳಿಸಿದರು.

**ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ವರದಿ ನೀಡಿ: ಸಿಎಂ ಸಿದ್ದರಾಮಯ್ಯ**

# ಕಾನೂನು ಸುವ್ಯವಸ್ಥೆಗಿಂತ ಯಾವುದೂ ದೊಡ್ಡದಲ್ಲ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಸುಳ್ಳು ಸುದ್ದಿಗಳಿಗೆ ಕಡ್ಡಾಯವಾಗಿ ಕಡಿವಾಣ ಹಾಕಬೇಕು. ಅನಿವಾರ್ಯವಾದರೆ ಸುಳ್ಳು ಸುದ್ದಿ ಹರಡಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದ್ದಾರೆ.

ಈ ಕುರಿತು ಅಧಿಕಾರಿಗಳೊಂದಿಗೆ ಮಾತನಾಡಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದ ಕಾನೂನು ಸುವ್ಯವಸ್ಥೆಗಿಂತ ಯಾವುದೂ ದೊಡ್ಡದಲ್ಲ. ರಾಜ್ಯದ ಜನರ ರಕ್ಷಣೆಗೆ ಮೊದಲ ಆದ್ಯತೆ ನೀಡಿ ಎಂದು ತಿಳಿಸಿದ್ದಾರೆ. ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ವರದಿ ನೀಡಿ ಎಂದು ಅಧಿಕಾರಗಳಿಗೆ ಸೂಚನೆ ನೀಡಿದ್ದಾರೆ.

ಮಾಧ್ಯಮಗಳು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಯನ್ನು ಹರಡುವುದನ್ನು ತಪ್ಪಿಸಲು ಕಟ್ಟೆಚ್ಚರ ವಹಿಸಬೇಕು. ಸಾಮಾಜಿಕ ಜಾಲತಾಣಗಳ ಮೇಲೆ ನಿರಂತರ ನಿಗಾ ವಹಿಸಬೇಕು. ವದಂತಿ ಹರಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಫ್ಯಾಕ್ಟ್ ಚೆಕ್ ನಿರಂತರವಾಗಿ ಮಾಡಬೇಕು. ಸುಳ್ಳು ಸುದ್ದಿ ಬಗ್ಗೆ ಮೂಲದಲ್ಲೇ ಅಧಿಕೃತ ಸ್ಪಷ್ಟೀಕರಣ ನೀಡಬೇಕು. ಗುಪ್ತಚರ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು. ಸಾರ್ವಜನಿಕ ಸೇವೆ ಒದಗಿಸುವ ತಾಣಗಳಲ್ಲಿ ಹೆಚ್ಚಿನ ಸುರಕ್ಷತೆಯನ್ನು ಖಾತ್ರಿಪಡಿಸಬೇಕು.

ಅಗ್ನಿಶಾಮಕ ದಳದ ಕೇಂದ್ರಗಳು ದಿನದ 24 ಗಂಟೆ ಸನ್ನದ್ಧ ಸ್ಥಿತಿಯಲ್ಲಿರಬೇಕು. ಎಲ್ಲಾ ಜಿಲ್ಲೆಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆದು, ಸಹಾಯವಾಣಿ ಆರಂಭಿಸಬೇಕು. ಪೌರ ರಕ್ಷಣಾ ವ್ಯವಸ್ಥೆಯನ್ನು ಬಲಪಡಿಸಿ, ಅವರಿಗೆ ಸೂಕ್ತ ತರಬೇತಿಯನ್ನು ಒದಗಿಸಬೇಕು. ಎಲ್ಲಾ ಜಿಲ್ಲೆಗಳಲ್ಲಿ ಪೌರ ರಕ್ಷಣಾ ವ್ಯವಸ್ಥೆಗೆ ಸ್ವಯಂಸೇವಕರನ್ನು ನೇಮಕ ಮಾಡುವ ಕಾರ್ಯ ಆರಂಭಿಸಬೇಕು. ಕರಾವಳಿಯಲ್ಲಿ ಭದ್ರತೆಯನ್ನು ಬಿಗಿಗೊಳಿಸಬೇಕು. ಎಲ್ಲಾ ಪ್ರಮುಖ ಸ್ಥಳಗಳಲ್ಲಿ ನಿರಂತರ ಗಸ್ತು ವ್ಯವಸ್ಥೆ ಮಾಡಬೇಕು ಎಂದು ಹೇಳಿದರು.

ಪರಿಸ್ಥಿತಿಯನ್ನು ದುರುಪಯೋಗಪಡಿಸಿಕೊಂಡು ದೇಶದ, ರಾಜ್ಯದ ಸಹಬಾಳ್ವೆಗೆ ಧಕ್ಕೆ ತರುವ, ಕೋಮುಭಾವನೆ ಕೆರಳಿಸಿ, ಕೋಮು ವಿಭಜನೆ ತರಲು, ದೇಶದ ಭದ್ರತೆಗೆ ಅಪಾಯ ತರಲು ಷಡ್ಯಂತ್ರ ನಡೆಸುತ್ತಿರುವ ಎಲ್ಲರ ಪಟ್ಟಿ ಸಿದ್ಧಪಡಿಸಿ ಕಾನೂನು ಕ್ರಮಕ್ಕೆ ಒಳಪಡಿಸಲು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಕ್ರಮ ವಹಿಸಬೇಕು. ಕೋಮು ಸಾಮರಸ್ಯ ಕದಡುವ ಪ್ರಯತ್ನಗಳ ಮೇಲೆ ನಿಗಾ ಇರಿಸಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಕೋಮು ಗೂಂಡಾಗಳ ಪಟ್ಟಿಯನ್ನು ತಯಾರಿಸಿ, ಅವರ ಮೇಲೆ ನಿಗಾ ಇಡಬೇಕು ಎಂದು ಮುಖ್ಯಮಂತ್ರಿಗಳು ಸೂಚನೆ ನೀಡಿದರು.

> ಅಕ್ರಮ ದಾಸ್ತಾನು ಮತ್ತು ಕಾಳಸಂತೆಯ ಮೇಲೆ ನಿರಂತರ ನಿಗಾವಹಿಸಿ, ಅನಗತ್ಯವಾಗಿ ಸಾಮಾಗ್ರಿಗಳ ಬೆಲೆ ಹೆಚ್ಚು ಮಾಡುವ ಪ್ರಯತ್ನಗಳನ್ನು ತಡೆಯಬೇಕು. ಕಾನೂನು ಸುವ್ಯವಸ್ಥೆಯೊಂದಿಗೆ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಕೈಗೊಳ್ಳಲು ಈಗಾಗಲೇ ಸೂಚನೆ ನೀಡಲಾಗಿದೆ. ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಸನ್ನದ್ಧರಾಗಿರಬೇಕು. ಈ ಕುರಿತು ರಾಜ್ಯ ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಮಾರ್ಗಸೂಚಿಯನ್ನು ಸಿದ್ಧಪಡಿಸಬೇಕು. ಪ್ರಮುಖ ಸ್ಥಳಗಳಲ್ಲಿ ಮಾಕ್ ಡ್ರಿಲ್ ಮಾಡಲು ಸೂಚನೆ ನೀಡಲಾಗಿದೆ. ಪ್ರಮುಖ ಸ್ಥಳಗಳಲ್ಲಿ ಹೆಚ್ಚಿನ ಭದ್ರತೆಯನ್ನು ಕಾಪಾಡಲು ಸೂಚನೆ ನೀಡಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

## ಎಸ್.ಎಸ್.ಎಲ್.ಸಿಯಲ್ಲಿ ಉತ್ತಮ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಡವಿ ಸೋಮಾಪುರ ಗ್ರಾಮದ ಸರಕಾರಿ ಶಾಲೆಯ ವಿದ್ಯಾರ್ಥಿನಿ ಪವಿತ್ರಾ ಕೃಷ್ಣಪ್ಪ ಖಾನಾಪುರ 589 ಅಂಕಗಳನ್ನು ಪಡೆದು ಶೇ. 94.34 ಫಲಿತಾಂಶದೊಂದಿಗೆ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ.

ಇದೇ ಶಾಲೆಯ ಭಾಗ್ಯ ಜಗ್ಗಲ-572 ಅಂಕ(ಶೇ. 91.52)ಗಳೊಂದಿಗೆ ದ್ವಿತೀಯ ಹಾಗೂ ಶಹನಾಜಬೇಗಂ ಲಕ್ಕುಂಡಿ-565 ಅಂಕ(ಶೇ. 90.40)ಗಳೊಂದಿಗೆ ತೃತೀಯ ಸ್ಥಾನ ಪಡೆಯುವ ಮೂಲಕ ಅಡವಿಸೋಮಾಪುರ ಗ್ರಾಮಕ್ಕೆ ಕೀರ್ತಿ ತಂದಿದ್ದಾರೆ.



ಸಾಧಕ ವಿದ್ಯಾರ್ಥಿಗಳಿಗೆ ಅಡವಿಸೋಮಾಪೂರದ ಶ್ರೀ ಕನಕದಾಸ ವಿವಿಧೋದ್ದೇಶಗಳ ಟ್ರಸ್ಟ್‌ನ ಅಧ್ಯಕ್ಷ ಮಂಜುನಾಥ ಜಡಿ ಮೌರ್ಯ, ಉಪಾಧ್ಯಕ್ಷ ಈರಪ್ಪ ಹೊಸಳ್ಳಿ, ಕಾರ್ಯದರ್ಶಿ ಪ್ರಕಾಶ ಖಾನಾಪುರ, ತುಳಸಪ್ಪ ನಾವಳ್ಳಿ, ಕೃಷ್ಣಪ್ಪ ಖಾನಾಪೂರ ಸೇರಿದಂತೆ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

## ಹೆಮ್ಮೆಯ ಸೈನಿಕರಿಗೆ ಅಭಿನಂದನೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಾರತೀಯ ಪ್ರವಾಸಿಗರನ್ನು ಹತ್ಯೆ ಮಾಡಿದ ಭಯೋತ್ಪಾದಕರ ವಿರುದ್ಧ ಭಾರತ ಸರ್ಕಾರ ಆಪರೇಷನ್ ಸಿಂಧೂರ ಹೆಸರಿನಲ್ಲಿ ಕಾರ್ಯಾಚಾರಣೆ ನಡೆಸಿ ಪಾಕಿಸ್ತಾನದೊಳಗೇ ನುಗ್ಗಿ ಉಗ್ರರ ತರಬೇತಿ ಕೇಂದ್ರ ಮತ್ತು 100 ಉಗ್ರರ ಸದ್ದಡಗಿಸಿದ ಭಾರತೀಯ ಯೋಧರಿಗೆ ಮತ್ತು ಈ ಕಾರ್ಯಾಚಾರಣೆಯಲ್ಲಿ ತನ್ನದೇ ಆದ ಯುದ್ಧ ನೀತಿಯನ್ನು ಅನುಸರಿಸಿ ಮತಾಂಧತೆಯಿಂದ ತುಂಬಿಕೊಂಡಿರುವ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಿದ ದೇಶದ ರಕ್ಷಣಾ ಯೋಧರಿಗೆ ಗದಗ ಜಿಲ್ಲಾ ಜೆಡಿಎಸ್ ಪಕ್ಷದ ಯುವ ಘಟಕದ ಅಧ್ಯಕ್ಷ ದೇವಪ್ಪ ಈ.ಮಲ್ಲಸಮುದ್ರ ಪತ್ರಿಕಾ ಪ್ರಕಟಣೆಯ ಮೂಲಕ ಅಭಿನಂದಿಸಿದ್ದಾರೆ.

## ಟಿಕೆಟ್ ರಹಿತ ಪ್ರಯಾಣಿಕರಿಂದ ದಂಡ ವಸೂಲಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ತನ್ನ ಸೇವೆ, ಹೊಸ ಹೊಸ ಉಪಕ್ರಮಗಳಿಂದ ಸಾಕಷ್ಟು ಹೆಸರು ಮಾಡಿದೆ. ಪ್ರಯಾಣಿಕರಿಗೆ ಆರಾಮದಾಯಕ, ಸುರಕ್ಷಿತ ಸಾರಿಗೆ ಸೇವೆ ನೀಡುತ್ತಿದೆ. ಇತ್ತ ರಹಿತ ಪ್ರಕರಣಗಳ ಬಗ್ಗೆಯು ಮಾಹಿತಿ ಲಭ್ಯವಾಗಿದೆ. ಕಳೆದ ಒಂದೇ ತಿಂಗಳಲ್ಲಿ ಕೆಎಸ್‌ಆರ್‌ಸಿಟಿ ಬಸ್‌ಗಳಲ್ಲಿ ಟಿಕೆಟ್ ಇಲ್ಲದೇ ಪ್ರಯಾಣ ಮಾಡಿದ ಸಾವಿರಾರು ಪ್ರಯಾಣಿಕರಿಂದ ಸುಮಾರು 7ಲಕ್ಷಕ್ಕೂ ಅಧಿಕ ಮೊತ್ತವು ದಂಡ ರೂಪದಲ್ಲಿ ಸಂಗ್ರಹವಾಗಿದೆ.

ರಾಜ್ಯದಲ್ಲಿ ಕಳೆದ ಏಪ್ರಿಲ್ ತಿಂಗಳಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ತನ್ನ ತನಿಖಾ ತಂಡಗಳಿಂದ ತಪಾಸಣಾ ಕಾರ್ಯವನ್ನು ಚುರುಕುಗೊಳಿಸಿತ್ತು. ಪರಿಣಾಮವಾಗಿ ಕೆಎಸ್‌ಆರ್‌ಟಿಸಿ ನಿಗಮದಡಿ ಸಂಚರಿಸುವ ಬಸ್‌ಗಳಲ್ಲಿ 43,244 ವಾಹನಗಳ ತನಿಖೆ ಮಾಡಲಾಗಿತ್ತು. ಈ ವೇಳೆ ಬರೋಬ್ಬರಿ 3882 ಪ್ರಕರಣಗಳನ್ನು ಪತ್ತೆ ಹಚ್ಚಲಾಯಿತು.

### ಶ್ರೀ ವೀರಭದ್ರೇಶ್ವರ ದೇವಸ್ಥಾನದ ಪುನರ್ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸದ್ಗುಣಗಳಿಂದ ಮನುಷ್ಯನ ಬದುಕು ಶ್ರೀಮಂತಗೊಳ್ಳಬೇಕು

■ವಿಜಯಸಾಕ್ಷಿ ಸುದ್ದಿ, ಅರಕಲಗೂಡು

ಸತ್ಕಾರ್ಯಗಳಿಂದ ಮನುಷ್ಯನ ಅಂತರಂಗ ಪರಿಶುದ್ಧವಾಗುತ್ತದೆ. ಸತ್ಯ ಶುದ್ಧ ಕಾಯಕದಿಂದ ಬದುಕು ಉಜ್ವಲಗೊಳ್ಳುತ್ತದೆ. ಮೌಲ್ಯಾಧಾರಿತ ಸದ್ಗುಣವಂತನ ಬದುಕು ಇನ್ನಿತರರಿಗೆ ದಾರಿದೀಪವಾಗುತ್ತದೆ. ಸದ್ಗುಣ ಮತ್ತು ಸಚ್ಚಾರಿತ್ರ್ಯದಿಂದ ಮನುಷ್ಯನ ಬದುಕು ಶ್ರೀಮಂತಗೊಳ್ಳಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ತಾಲೂಕಿನ ಮುಸವತ್ತೂರು ಗ್ರಾಮದ ನೂತನ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಪುನರ್ ಪ್ರತಿಷ್ಠಾಪನೆ ಹಾಗೂ ಶ್ರೀ ಶಂಕರಲಿಂಗೇಶ್ವರ ಜಂಪೋತ್ಸವದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ಮಣ್ಣು ನೀರು ಬೆಂಕಿ ಗಾಳಿ ಮತ್ತು ಕಲ್ಲಿನಲ್ಲಿಯೂ ದೇವರನ್ನು ಕಂಡು ಪೂಜಿಸಿದವರು ಭಾರತೀಯರು. ಚಿನ್ನವಿಲ್ಲದೇ ಮನುಷ್ಯ ಬದುಕಬಹುದು. ಆದರೆ ಅನ್ನವಿಲ್ಲದೇ ಬದುಕಲು ಸಾಧ್ಯವಿಲ್ಲ. ದೇಹ, ಮನ, ಬುದ್ಧಿ, ಕೈಕಾಲು ಇವುಗಳೆಲ್ಲವೂ ನಿಜವಾದ ಸಂಪತ್ತು. ಹಣ, ಚಿನ್ನ, ಬೆಳ್ಳಿ, ಒಡವೆಗಳಿಂಗ ಬದುಕು ಕಟ್ಟಿಕೊಳ್ಳುವುದು ಒಳಿತಲ್ಲ.

ಮೌಲ್ಯಾಧಾರಿತ ಧರ್ಮದ ಪರಿಪಾಲನೆಯನ್ನು ಮಾಡಿ ಮುನ್ನಡೆದರೆ ಬದುಕು ಆದರ್ಶಗೊಳ್ಳುತ್ತದೆ. ಮನಸಿನ ಹೊಯ್ದಾಟವನ್ನು ಶಾಂತ-ಪ್ರಶಾಂತಗೊಳಿಸುವ ಮಾರ್ಗವೇ ಆಧ್ಯಾತ್ಮವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ಸ್ಪಷ್ಟಪಡಿಸಿದ್ದಾರೆ. ಆಚಾರ್ಯರು ಋಷಿಮುನಿಗಳು ಸಂತ-ಮಹಾಂತರು ಭೌತಿಕ ಬದುಕಿಗೆ ಸೋಲದೇ ಅಧ್ಯಾತ್ಮ ಮಾರ್ಗದಲ್ಲಿ ಆನಂದದಿಂದ ಬಾಳಿ ಇನ್ನಿತರರ ಬಾಳಿಗೆ ದಾರಿದೀಪವಾದರು. ಮುಸವತ್ತೂರು ಗ್ರಾಮದ ಸಕಲ ಸದ್ಭಕ್ತರ ಸಹಕಾರದಿಂದ ನೂತನ ಶ್ರೀ ವೀರಭದ್ರೇಶ್ವರ ದೇವಸ್ಥಾನ ನಿರ್ಮಿಸಿ ಮೂರ್ತಿ ಪ್ರತಿಷ್ಠಾಪನೆ ಮಾಡಿಸಿರುವುದು ತಮ್ಮೆಲ್ಲರಲ್ಲಿರುವ ಧರ್ಮಶ್ರದ್ಧೆ ದೇವರಲ್ಲಿಟ್ಟ ನಂಬಿಕೆ ಕಂಡು ಅತ್ಯಂತ ಹರುಷ ತಂದಿದೆ ಎಂದರು. ಸಮಾರಂಭ ಉದ್ಘಾಟಿಸಿದ ಹಾಸನ ಜಿಲ್ಲಾ ಬಿ.ಜೆ.ಪಿ ಅಧ್ಯಕ್ಷ ಸಿದ್ದೇಶ ನಾಗೇಂದ್ರ ಮಾತನಾಡಿ, ವಿದ್ಯಾ-ಬುದ್ಧಿ, ಹೃದಯ-ಹೊಟ್ಟೆ, ನೆಲ-ಜಲ, ಅನ್ನ-ಗಾಳಿ, ಬೆಳಕು ಕೊಟ್ಟವನು ಭಗವಂತ. ಬದುಕಿನ ಬೆಂಗಾಡು ಸಮೃದ್ಧಗೊಳ್ಳಲು ದೇವರ ಕಾರುಣ್ಯದ ಕಿರಣ ಬೇಕು. ಸಂಸ್ಕಾರ ಸಂಸ್ಕೃತಿ ಎಂಬ ಬೀಜ ಬಿತ್ತಿ ಜೀವನದಲ್ಲಿ ಸತ್ಫಲಗಳನ್ನು ಪಡೆಯಬೇಕು. ಶ್ರೀ ರಂಭಾಪುರಿ ಜಗದ್ಗುರುಗಳು ಸಣ್ಣ ಹಳ್ಳಿಗೆ ದಯಮಾಡಿಸಿರುವುದು ತಮ್ಮೆಲ್ಲರ ಪೂರ್ವಾರ್ಜಿತ ಪುಣ್ಯದ ಫಲವಾಗಿದೆ ಎಂದರು.

ದೊಡ್ಡಬೆಮ್ಮತ್ತಿ ಅ.ಭಾ.ವೀ ಮಹಾಸಭೆಯ ಅಧ್ಯಕ್ಷ ಸುರೇಶ ನೇತೃತ್ವ ವಹಿಸಿದ್ದರು. ಹಾರಿಕಾ ಮಂಜುನಾಥ ಭಾರತೀಯ ಸಂಸ್ಕೃತಿ ಕುರಿತು ವಿಶೇಷ ಉಪನ್ಯಾಸವನ್ನಿತ್ತರು. ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಹಾಸನದ ಅ.ಭಾ.ವೀ ಮಹಾಸಭೆ ನಿರ್ದೇಶಕ ಯೋಗೇಶ್ ರಂಗಾಪುರ, ಶ್ರೀಕಂಠಪ್ಪ, ಬಸವರಾಜು, ಮಲ್ಲೇಶಣ್ಣ ಕತ್ತಿಮಲ್ಲೇನಹಳ್ಳಿ, ಜಗದೀಶ ದಡದಹಳ್ಳಿ, ಬಸವರಾಜು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಹೆಗ್ಗಡಹಳ್ಳಿಮಠದ ಷಡ್ಭಾವರಹಿತೇಶ್ವರ ಶ್ರೀಗಳು, ಕೆಸವತ್ತೂರು ಬಸವರಾಜೇಂದ್ರ ಸ್ವಾಮಿಗಳು, ಶಿರದನಹಳ್ಳಿ ಸದಾಶಿವ ಸ್ವಾಮಿಗಳು ಉಪಸ್ಥಿತರಿದ್ದರು. ರಶ್ಮಿ ಪರಮೇಶ ನಿರೂಪಿಸಿದರು.




ಸಮ್ಮುಖ ವಹಿಸಿದ ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮಾನವ ಜೀವನ ಅಮೂಲ್ಯ. ದೇವರು ಕೊಟ್ಟ ಕೊಡುಗೆಗೆ ಸರಿಸಾಟಿಯಾದುದು ಇನ್ನೊಂದಿಲ್ಲ. ಅರಿತು ಬಾಳಿದರೆ ಬಾಳು ಬಂಗಾರ. ಮರೆತು ಬಾಳಿದರೆ ಬಾಳು ಬಂಧನಕಾರಿಯಾಗುತ್ತದೆ. ಮನುಷ್ಯ ಜೀವನದಲ್ಲಿ ಆಸ್ತಿ ಅಂತಸ್ತು, ಅಧಿಕಾರ ಮುಖ್ಯವಲ್ಲ. ಶಾಂತಿ ಜ್ಞಾನದ ಸಂಪತ್ತು ಮುಖ್ಯ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ವಿಚಾರ ಧಾರೆಗಳು ನಮ್ಮೆಲ್ಲರ ಬಾಳಿಗೆ ಆಶಾಕಿರಣ ಎಂದರು.

## ಭಾರತ-ಪಾಕಿಸ್ತಾನ ನಡುವೆ ಕದನ ವಿರಾಮ: ದೃಢಪಡಿಸಿದ ವಿದೇಶಾಂಗ ಇಲಾಖೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಇಂದು (ಮೇ.10) ಸಂಜೆ 5 ಗಂಟೆಯಿಂದ ಅನ್ವಯವಾಗುವಂತೆ ಕದನ ವಿರಾಮಕ್ಕೆ ಭಾರತ ಮತ್ತು ಪಾಕಿಸ್ತಾನ ಒಪ್ಪಿರುವುದಾಗಿ ಭಾರತೀಯ ವಿದೇಶಾಂಗ ಸಚಿವಾಲಯ ಘೋಷಿಸಿದೆ.

"ಪಾಕಿಸ್ತಾನದ ಮಿಲಿಟರಿ ಕಾಂರ್ಯಾಚರಣೆಗಳ ಮಹಾನಿರ್ದೇಶಕರು (ಡಿಜಿಎಂಒ) ಇಂದು ಮಧ್ಯಾಹ್ನ 15:35 (3:35) ಗಂಟೆಗೆ ಭಾರತೀಯ ಡಿಜಿಎಂಒಗೆ ಕರೆ ಮಾಡಿದ್ದರು.

ಭಾರತೀಯ ಕಾಲಮಾನ ಸಂಜೆ 5 ಗಂಟೆಯಿಂದ ಜಾರಿಗೆ ಬರುವಂತೆ ನೆಲ, ವಾಯು ಮತ್ತು ಸಮುದ್ರದ ಮೂಲಕ ನಡೆಸುವ ಎಲ್ಲಾ ರೀತಿಯ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸಲು ಎರಡೂ ಕಡೆಯವರು ಒಪ್ಪಂದ ಮಾಡಿಕೊಳ್ಳಲಾಗಿದೆ" ಎಂದು ವಿದೇಶಾಂಗ ಕಾರ್ಯದರ್ಶಿ



ವಿಕ್ರಮ್ ಮಿಸ್ರಿ ತಿಳಿಸಿದ್ದಾರೆ.

"ಭಾರತ ಮತ್ತು ಪಾಕಿಸ್ತಾನ ಇಂದು ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಬಗ್ಗೆ ಒಪ್ಪಂದ ಮಾಡಿಕೊಂಡಿವೆ.

ಭಾರತವು ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳ ವಿರುದ್ಧ ದೃಢ ಮತ್ತು ರಾಜಿಯಾಗದ ನಿಲುವನ್ನು ನಿರಂತರವಾಗಿ ಕಾಯ್ದುಕೊಂಡಿದೆ.

ಅದು ಹಾಗೆಯೇ ಮುಂದುವರಿಯುತ್ತದೆ" ಎಂದು ಭಾರತದ ವಿದೇಶಾಂಗ ಸಚಿವ ಎಸ್.ಜೈಶಂಕರ್ ಹೇಳಿದ್ದಾರೆ.

ಭಾರತ ಮತ್ತು ಪಾಕಿಸ್ತಾನ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಕೂಡ ಹೇಳಿಕೊಂಡಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಟ್ರಂಪ್, "ಅಮೆರಿಕದ ಮಧ್ಯಸ್ಥಿಕೆಯಲ್ಲಿ ರಾತ್ರಿಯಿಡೀ ನಡೆದ ಮಾತುಕತೆ ನಂತರ, ಭಾರತ ಮತ್ತು ಪಾಕಿಸ್ತಾನ ಸಂಪೂರ್ಣ ಹಾಗೂ ತಕ್ಷಣದ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಘೋಷಿಸಲು ನನಗೆ ಸಂತೋಷವಾಗುತ್ತಿದೆ.

ಬುದ್ಧಿವಂತಿಕೆಯ ನಿರ್ಧಾರ ತೆಗೆದುಕೊಂಡ ಎರಡೂ ದೇಶಗಳಿಗೆ ಅಭಿನಂದನೆಗಳು" ಎಂದು ಬರೆದುಕೊಂಡಿದ್ದಾರೆ.

## ಸನ್ಮಾರ್ಗ ಕಾಲೇಜಿನ ಸಾಧಕ ವಿದ್ಯಾರ್ಥಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸ್ಟುಡೆಂಟ್ ಎಜ್ಯುಕೇಶನ್ ಸಂಸ್ಥೆಯ ವಿಜ್ಞಾನ ವಿಭಾಗದ ವಿದ್ಯಾರ್ಥಿ ಪ್ರಜ್ವಲ್ ಅಂಗಡಿ 2024-25ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 94.67ರಷ್ಟು ಅಂಕಗಳನ್ನು ಪಡೆಯುವುದರ ಜೊತೆಗೆ ಗಣಿತಶಾಸ್ತ್ರದಲ್ಲಿ 100ಕ್ಕೆ 100 ಅಂಕಗಳನ್ನು ಗಳಿಸಿ ವಿದ್ಯಾಲಯಕ್ಕೆ ಪ್ರಥಮ ಸ್ಥಾನ ಗಳಿಸಿದ್ದಾನೆ.

ಸಾಧಕ ವಿದ್ಯಾರ್ಥಿಯನ್ನು ಕಾಲೇಜಿನ ವತಿಯಿಂದ ಹೃತ್ಪೂರ್ವಕವಾಗಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಸದಸ್ಯರಾದ ಪ್ರೊ. ರೋಹಿತ ಒಡೆಯರ್, ಪ್ರೊ. ರಾಹುಲ್ ಒಡೆಯರ್ ಹಾಗೂ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಹಾಗೂ ಕಾಲೇಜಿನ ಸಮಸ್ತ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದರು. ಬೋಧಕರಾದ ಪ್ರೊ. ಪುನೀತ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ಪರಶುರಾಮ ಕೊಟ್ನೆಕಲ್, ಪ್ರೊ. ಶಿವಕುಮಾರ ವಜ್ರಬಂಡಿ ಮತ್ತು ಪ್ರೊ. ಸಂಗೀತಾ ಬೀಳಗಿ ಮುಂತಾದವರು ಪಾಲ್ಗೊಂಡಿದ್ದರು.

## ಒಗ್ಗಟ್ಟಿನಿಂದ ಬಾಳಿ ಸದೃಢ ಸಮಾಜ ನಿರ್ಮಿಸೋಣ

▶▶ಮೊದಲನೇ ಪುಟದಿಂದ




ಎಂದು ಹೇಮರಡ್ಡಿ ಮಲ್ಲಮ್ಮನವರ ಜೀವನ ಸಾಧನೆ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಮಾಜಿ ಶಾಸಕರುಗಳಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ, ಜಿಲ್ಲಾ ರಡ್ಡಿ ಸಮಾಜದ ಅಧ್ಯಕ್ಷ ರವೀಂದ್ರ ಮೂಲಿಮನಿ ಸೇರಿದಂತೆ ಸಮಾಜದ ಗಣ್ಯರು, ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

ಪಂಡಿತ ವೆಂಕಟೇಶ ಅಲ್ಕೋಡ್ ಹಾಗೂ ಸಂಗಡಿಗರು ನಾಡಗೀತೆ ಹಾಗೂ ಭಕ್ತಿ ಸಂಗೀತ ಗಾಯನ ಪ್ರಸ್ತುತಿಸಿದರು. ಎಸ್.ಎಸ್. ಶಿವನಗೌಡರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸುಧಾ ಹುಚ್ಚಣ್ಣವರ ಕಾರ್ಯಕ್ರಮ ನಿರೂಪಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರುಗಳಿಗೆ ಸಚಿವರು ಹಾಗೂ ಗಣ್ಯರು ಸನ್ಮಾನಿಸಿದರು.

### ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅರುಣ ಕುಲಕರ್ಣಿ

# ಶ್ರೀ ಶಂಕರರು ಹಿಂದೂ ಧರ್ಮದ ಪುನರುತ್ಥಾರಕರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರು ಹಿಂದೂ ಧರ್ಮದ ಪುನರುತ್ಥಾರಕರು. ಹಿಂದೂ ಧರ್ಮ ನಶಿಸಿ ಹೋಗುತ್ತಿದ್ದ ಸಂದರ್ಭದಲ್ಲಿ ಅವತರಿಸಿದ ಅವರು ಹಿಂದೂ ಧರ್ಮದ ಪುನರುತ್ಥಾನಕ್ಕೆ ತಮ್ಮನ್ನೇ ಸಮರ್ಪಿಸಿಕೊಂಡರು ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಆಚರಿಸಲಾದ ಶ್ರೀ ಶಂಕರಾಚಾರ್ಯರ ಜಯಂತಿಯಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಕೇವಲ 32 ವರ್ಷ ಬದುಕಿದ್ದ ಶಂಕರರು ಅಷ್ಟರಲ್ಲಾಗಲೇ ವೇದಗಳಿಗೆ ಭಾಷ್ಯವನ್ನು ಬರೆದರು. ಅನೇಕ ವಾದಗಳನ್ನು ಗೆದ್ದು ಸರ್ವಜ್ಞ ಪೀಠವನ್ನಲಂಕರಿಸಿದ ಮಹಾತ್ಮರು.



ಭರತ ಖಂಡದಾದ್ಯಂತ ಧರ್ಮ ಸ್ಥಾಪನೆಗಾಗಿ ನಾಲ್ಕೂ ದಿಕ್ಕುಗಳಲ್ಲಿ ಮಠಗಳನ್ನು ಸ್ಥಾಪಿಸಿದರು. ನಮ್ಮ ನಾಡಿನ ಶೃಂಗೇರಿಯೂ ಸಹ ಅವುಗಳಲ್ಲಿ ಒಂದಾಗಿರುವುದು ನಮಗೆಲ್ಲ ಹೆಮ್ಮೆಯ ವಿಷಯವಾಗಿದೆ ಎಂದರು.


ಶಂಕರಾಚಾರ್ಯರರಿಗೆ ಸುಮಂಗಲೆಯರು ಆರತಿ ಬೆಳಗಿದರು. ಈವೇಳೆ ದೇವಸ್ಥಾನದ ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ, ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ, ಕಾರ್ಯದರ್ಶಿ ರಘುನಾಥ ಕೊಂಡಿ, ಶ್ರೀಪಾದಭಟ್ಟ ಜೋಷಿ, ಶ್ರೀಪಾದ ಕುಲಕರ್ಣಿ, ಅರುಣ ಕುಲಕರ್ಣಿ(ಕುರಗಡ್ಡಿ), ಆನಂದ ಕುಲಕರ್ಣಿ, ಮುಕುಂದಭಟ್ಟ ಸೂರಭಟ್ಟನವರ, ನಾಗೇಶಭಟ್ಟ ಗ್ರಾಮಪುರೋಹಿತ, ಪ್ರಶಾಂತ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ರಾಮಕೃಷ್ಣ ಸದರಜೋಷಿ, ಶೋಭಾ ಕುಲಕರ್ಣಿ, ವಿಮಲಾಬಾಯಿ ಗ್ರಾಮಪುರೋಹಿತ, ಶಾರದಾಬಾಯಿ ಗ್ರಾಮಪುರೋಹಿತ, ರಾಜಶ್ರೀ ಕುಲಕರ್ಣಿ, ಪರಿಮಳಾ ಗ್ರಾಮಪುರೋಹಿತ, ಪದ್ಮಾ ಕುಲಕರ್ಣಿ, ಪ್ರಭಾ ರಾಯಭಟ್ಟನವರ, ನಿಖಿತಾ ಗ್ರಾಮಪುರೋಹಿತ, ಅರ್ಚನಾ ಕುಲಕರ್ಣಿ, ಅನಿತಾ ಗ್ರಾಮಪುರೋಹಿತ, ಜ್ಯೋತಿ ನಾಡಿಗೇರ, ರೂಪಾ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ ಇನ್ನಿತರರಿದ್ದರು.

ಅದ್ವೈತ ಸಿದ್ಧಾಂತವನ್ನು ಜಗತ್ತಿಗೆ ಬೋಧಿಸಿದ ಶ್ರೀ ಶಂಕರರು, ಈ ಸಿದ್ಧಾಂತದ ಪ್ರತಿಪಾದನೆಗೆ ಬೇಕಾದ ಎಲ್ಲ ಅಂಶಗಳನ್ನೂ ನೀಡಿದರು. ಅಜ್ಞಾನದ ನಾಶವೇ ಮೋಕ್ಷ. ಸೂಕ್ತ ಸಮಯದಲ್ಲಿ ದಾನ ಮಾಡುವುದೇ ಮೌಲ್ಯಯುತ. ಸತ್ಯವೇ ಅಂತಿಮವಾಗಿ ಜೀವಿಗಳಿಗೆ ಸಹಾಯ ಮಾಡುವ ಮಾರ್ಗ. ಒಬ್ಬರ ಶುದ್ಧ ಮನಸ್ಸನ್ನು ಅತ್ಯಂತ ಶ್ರೇಷ್ಠ ಯಾತ್ರೆ ಎಂದು ಪರಿಗಣಿಸಲಾಗುತ್ತದೆ. ಬ್ರಹ್ಮನೊಂದಿಗೆ ಬಂಧವನ್ನು ಪಡೆಯಲು ಅಂತಿಮವಾಗಿ ಸಹಾಯ ಮಾಡುವುದು ಜ್ಞಾನ ಎಂಬಿತ್ಯಾದಿ ಬೋಧನೆಗಳನ್ನು ಶಂಕರರು ನೀಡಿದರು ಎಂದು ಕುಲಕರ್ಣಿ ಹೇಳಿದರು.

## ಎನ್‌ಇಪಿ ಜಾರಿಗೊಳಿಸುವಂತೆ ರಾಜ್ಯವನ್ನು ಒತ್ತಾಯಿಸಲು ಸಾಧ್ಯವಿಲ್ಲ: ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ತಮಿಳುನಾಡು ಸರ್ಕಾರ ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ -2020 (ಎನ್‌ಇಪಿ) ಮತ್ತು ಅದರ 'ತ್ರಿಭಾಷಾ ಸೂತ್ರ'ವನ್ನು ಜಾರಿಗೊಳಿಸುವಂತೆ ನಿರ್ದೇಶಿಸಲು ಕೋರಿ ವ್ಯಕ್ತಿಯೊಬ್ಬರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ಸುಪ್ರೀಂ ಕೋರ್ಟ್ ಶುಕ್ರವಾರ (ಮೇ.9) ವಜಾಗೊಳಿಸಿದೆ. ಸಂವಿಧಾನದ 32ನೇ



ವಿಧಿಯಡಿಯಲ್ಲಿ ಯಾವುದೇ ರಾಜ್ಯ ಎನ್‌ಇಪಿ ಅಳವಡಿಸಿಕೊಳ್ಳುವಂತೆ ಒತ್ತಾಯಿಸಿ ನ್ಯಾಯಾಲಯ ಯಾವುದೇ ನಿರ್ದೇಶನ ನೀಡಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿ ಜೆ.ಬಿ. ಪಾರ್ದಿವಾಲಾ ಮತ್ತು ನ್ಯಾಯಮೂರ್ತಿ ಆರ್. ಮಹಾದೇವನ್ ಅವರನ್ನೊಳಗೊಂಡ ಪೀಠ ಹೇಳಿದೆ.

## ನಿಧನ

**ಗಿರಿಜಮ್ಮ ವೀರಪ್ಪ ಹಸಬಿ**



ಗದಗ: ತಾಲೂಕಿನ ಹೊಂಬಳ ಗ್ರಾಮದ ಶ್ರೀಮತಿ ಗಿರಿಜಮ್ಮ ವೀರಪ್ಪ ಹಸಬಿ (97) ಇವರು ಶುಕ್ರವಾರ ನಿಧನರಾದರು. ಮೃತರು ಮೂವರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ಶ್ರೀರಾಮಕರುಣಾನಂದ ಶಾಲೆಯ ವಿದ್ಯಾರ್ಥಿಗಳ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಇಲ್ಲಿನ ಬಿಂಕದಕಟ್ಟಿಯ ಶ್ರೀರಾಮಕರುಣಾನಂದ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಶಾಲೆಯ ವಿದ್ಯಾರ್ಥಿಗಳಾದ ಮಿನಾಜ್ ಸೊನ್ನೆಖಾನ್ ಶೇ. 91.68 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ ಸ್ಥಾನವನ್ನು ಪಡೆದಿದ್ದಾಳೆ. ಮನು ಭೂಮಕ್ಕನವರ್ ಶೇ. 91.34 ಅಂಕಗಳೊಂದಿಗೆ ಶಾಲೆಗೆ



ದ್ವಿತೀಯ ಸ್ಥಾನವನ್ನು ಹಾಗೂ ಸಬಿಯಾ ಗೂಳಗುಂದಿ ಶೇ. 84.68 ಅಂಕಗಳನ್ನು ಪಡೆದು



ಶಾಲೆಗೆ ತೃತೀಯ ಸ್ಥಾನವನ್ನು ಪಡೆದಿದ್ದಾಳೆ. ಬಾಲಕರ ವಿಭಾಗದಲ್ಲಿ ವರುಣ ಉಮಚಗಿ ಶೇ. 83.2



ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿಯನ್ನು ತಂದಿದ್ದಾರೆ. ಸಾಧಕ ವಿದ್ಯಾರ್ಥಿಗಳಿಗೆ ಶಾಲಾ



ಆಡಳಿತ ಮಂಡಳಿಯವರು, ಪ್ರಾಂಶುಪಾಲರು, ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಶಿಕ್ಷಕರ ಭರ್ತಿಗೆ ಅಧಿಸೂಚನೆ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುವ ವಿವಿಧ ಪದವಿ ಪೂರ್ವ ಕಾಲೇಜುಗಳಲ್ಲಿ ಅಗತ್ಯವಿರುವ ಉಪನ್ಯಾಸಕರು ಹಾಗೂ ಶಿಕ್ಷಕರ ಭರ್ತಿಗೆ ಅಧಿಸೂಚನೆ ಬಿಡುಗಡೆ ಮಾಡಲಾಗಿದೆ. ಪದವಿ, ಬಿ.ಇಡಿ, ಸ್ನಾತಕೋತ್ತರ ಪದವಿ ಹಾಗು ಬಿ.ಇಡಿ ಶಿಕ್ಷಣ ಪಡೆದವರು, ಬಿಪಿ.ಇಡಿ ಶಿಕ್ಷಣ ಪಡೆದವರು ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಈ ಹುದ್ದೆಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ಎಲ್ಲ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಮಾಡಲಿದ್ದು, ವಿಜ್ಞಾನ ವಿಭಾಗ, ಕಲಾ ವಿಭಾಗ, ವಾಣಿಜ್ಯ ವಿಭಾಗ ಸೇರಿದಂತೆ, ಎಲ್ಲ ವಿಭಾಗಗಳಲ್ಲಿ ಖಾಲಿ ಇರುವ ವಿಷಯಗಳಿಗೆ ಎದುರಾಗಿ ಭರ್ತಿ ಮಾಡಲಾಗುವುದು. ಆಸಕ್ತರು ತಮ್ಮ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ಭೇಟಿ ನೀಡಿ, ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದಾಗಿದೆ.

ಖಾಲಿ ಇರುವ ವಿಷಯದ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಸ್ನಾತಕೋತ್ತರ ಪದವಿ ಜತೆಗೆ, ಬಿ.ಇಡಿ ಶಿಕ್ಷಣ ಪಡೆದಿರಬೇಕು. ಟಿಇಟಿ ಜತೆಗೆ ಕಾರ್ಯಾನುಭವ ಇರುವವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.

## ಫಲ ನೀಡಿದ ಟ್ರಂಪ್ ಸಂಧಾನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತ ಮತ್ತು ಪಾಕಿಸ್ತಾನದ ನಡುವೆ ಸಂಘರ್ಷವನ್ನು ಕಡಿಮೆ ಮಾಡಲು ಅಮೆರಿಕ ನಡೆಸಿದ ಪ್ರಯತ್ನ ಫಲ ಕೊಟ್ಟಿದೆ.

ಆಪರೇಷನ್ ಸಿಂದೂರ ಕಾರ್ಯಾಚರಣೆಯು ಶುರುವಾದ ನಂತರ ಮೇ 7ರಿಂದಲೂ ಭಾರತ ಮತ್ತು ಪಾಕಿಸ್ತಾನದ ನಡುವೆ ಕ್ಷಿಪಣಿ ಹಾಗೂ ಡ್ರೋನ್ ದಾಳಿಗಳು ನಡೆಯುತ್ತಿದೆ. ಗಡಿ ಭಾಗಗಳಲ್ಲಿ ಪಾಕಿಸ್ತಾನವು ಶೆಲ್ ದಾಳಿ ಹಾಗೂ ಗುಂಡಿನ ದಾಳಿಗಳನ್ನು ನಡೆಸಿ ಜನಸಾಮಾನ್ಯರ ಪ್ರಾಣ ಬಲಿ ಪಡೆದಿದೆ.

ಅದಕ್ಕೆ ಭಾರತದಿಂದಲೂ ತಕ್ಕ ಉತ್ತರ ಸಿಗುತ್ತಿದ್ದಂತೆ ಪಾಕಿಸ್ತಾನವು ತಡಬಡಿಸಿ ಹೋಗಿತ್ತು.

### ಮೇ 13ರಿಂದ 17ರವರೆಗೆ ಧಾರವಾಡ ತೋಟಗಾರಿಕೆ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ಮಾವಿನ ಹಬ್ಬ

# 'ಮಾವು ಮೇಳ' ಉದ್ಘಾಟನಾ ಸಮಾರಂಭ ಮೇ 13ಕ್ಕೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ಮತ್ತು ತೋಟಗಾರಿಕೆ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ 2025–26ನೇ ಸಾಲಿನ ಮಾವು ಮೇಳವನ್ನು ಮೇ 13ರಿಂದ 17ರವರೆಗೆ ಆಯೋಜಿಸಲಾಗಿದ್ದು, ಮಾವು ಮೇಳದ ಉದ್ಘಾಟನಾ ಸಮಾರಂಭವನ್ನು ಮೇ 13ರಂದು ಬೆಳಿಗ್ಗೆ 10:30 ಗಂಟೆಗೆ ಧಾರವಾಡ ತೋಟಗಾರಿಕೆ ಉಪನಿರ್ದೇಶಕರ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದೆ.



ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಇಲಾಖೆ ಸಚಿವರಾದ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಗಣಿ ಮತ್ತು ಭೂ–ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ ಗೌರವ ಉಪಸ್ಥಿತಿ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್. ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ–ಧಾರವಾಡ ಮಹಾನಗರ ಮಹಾಪೌರರಾದ ರಾಮಪ್ಪ ಕೃಷ್ಣಪ್ಪ ಬಡಿಗೇರ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಜಿಲ್ಲಾ ಹಾಪ್ ಕಾಮ್ಸ್‌ನ ಅಧ್ಯಕ್ಷ ಸಿದ್ದಪ್ಪಾ ಪ್ಯಾಟಿ ಹಾಗೂ ಜಿಲ್ಲಾ ಕೃಷಿ ಸಮಾಜದ ಅಧ್ಯಕ್ಷ ಮಲ್ಲನಗೌಡ ಪಾಟೀಲ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ. ಶಮ್ಲಾ ಇಖ್ಬಾಲ್, ತೋಗಾರಿಕೆ ನಿರ್ದೇಶಕ ರಮೇಶ ಡಿ.ಎಸ್, ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ, ತೋಟಗಾರಿಕೆ (ಕ್ಷೇತ್ರ ಮತ್ತು ನರ್ಸರಿ) ಅಪರ ನಿರ್ದೇಶಕ ಡಾ. ಕೆ.ಎಂ. ಪರಶಿವಮೂರ್ತಿ, ತಾಳೆ ಬೆಳೆ ಯೋಜನೆಯ ತೋಟಗಾರಿಕೆ ಅಪರ ನಿರ್ದೇಶಕ ಡಾ. ಪಿ.ಎಂ. ಸೊಬರದ, ಬೆಂಗಳೂರ (ರಾತೋಮಿ) ಕಾರ್ಯನಿರ್ವಾಹಕ ನಿರ್ದೇಶಕ ಹಾಗೂ ಧಾರವಾಡ ಜಿಲ್ಲಾ ನೋಡೆಲ್ ಅಧಿಕಾರಿ ಡಾ. ಕೆ.ಬಿ. ದುಂಡಿ ಹಾಗೂ ಬೆಳಗಾವಿ ವಿಭಾಗದ ತೋಟಗಾರಿಕೆ ಜಂಟಿ ನಿರ್ದೇಶಕ ಡಾ. ಸೋಮಶೇಖರ ಹುಲ್ಲೋಳಿ ಅವರು ಭಾಗವಹಿಸುವರೆಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕರು ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕರು ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್.ಖಾದ್ರಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು. ಶಾಸಕ ಅರವಿಂದ ಚಂದ್ರಕಾಂತ ಬೆಲ್ಲದ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

### ಬ್ರಹ್ಮ ಸಮಾಜದ ವತಿಯಿಂದ ಭಾರತೀಯ ಸೈನಿಕರಿಗೆ ಜಯಘೋಷ

# 'ಸಿಂಧೂರ'ದ ಸೈನಿಕರಿಗೆ ಅಭಿನಂದನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಾರತೀಯ ಮಹಿಳೆಯರ ಸಿಂಧೂರವನ್ನು ಅಳಿಸಿ ಹಾಕಿದ ನರಹಂತಕ ಉಗ್ರರ ವಿರುದ್ಧ ಅದೇ ಸಿಂಧೂರದ ಹೆಸರಿನಲ್ಲಿ ಪ್ರತೀಕಾರದ ಕ್ರಮವನ್ನು ಕೈಗೊಂಡು ಯಶಸ್ವಿಯಾಗಿರುವ ಭಾರತೀಯ ಸೈನಿಕರಿಗೆ ಇಲ್ಲಿನ ಬ್ರಹ್ಮ ಸಮಾಜ ಹೃತ್ಪೂರ್ವಕವಾದ ಅಭಿನಂದನೆಯನ್ನು ಸಲ್ಲಿಸಿತು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಶ್ರೀ ದತ್ತಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಅವರ ಅಧ್ಯಕ್ಷತೆಯಲ್ಲಿ ಸಭೆ ಸೇರಿದ್ದ ಬ್ರಹ್ಮ ಸಮಾಜವು ಸೈನಿಕರಿಗೆ ಇನ್ನಷ್ಟು ಬಲವನ್ನು ತುಂಬಲು ಶ್ರೀ ದತ್ತಾತ್ರೇಯನಲ್ಲಿ ಪ್ರಾರ್ಥಿಸಿತು.

ರಘುನಾಥ ಕೊಂಡಿ ಮಾತನಾಡಿ, ಉಗ್ರರು ಮನುಷ್ಯತ್ವವನ್ನೇ ಮರೆತ ರಕ್ತ ಪಿಪಾಸುಗಳು. ಅವರಿಗೆ ಬೆಂಬಲ ನೀಡುತ್ತಿರುವ ಪಾಕಿಸ್ತಾನಕ್ಕೆ ಎಂದಿಗೂ ಅಪರಾಧಿ ಮನೋಭಾವ ಕಾಡಿಲ್ಲ. ತನ್ನ ದೇಶದಲ್ಲಿ ಉಗ್ರರಿದ್ದರೆ ಇಡೀ ಜಗತ್ತೇ ತನಗೆ ಹೆದರುತ್ತದೆ ಎಂಬ ಧೋರಣೆಯನ್ನು ಅದು ಎಂದಿನಿಂದಲೂ ಬೆಳೆಸಿಕೊಂಡು ಬಂದಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಪಹಲ್ಗಾಮ ದಾಳಿಯ ನಂತರ ಘೋಷಿಸಿದಂತೆ ಪಾಕಿಸ್ತಾನದ ಮೇಲೆ ಆಪರೇಷನ್ ಸಿಂಧೂರ ನಡೆಸುವ ಮೂಲಕ ಪಾಕಿಸ್ತಾನಕ್ಕೆ ತಕ್ಕ ಉತ್ತರ ಕೊಟ್ಟಿದ್ದಾರೆ. ಅದರ ಸೊಕ್ಕು ಮುರಿಯಬೇಕಾದರೆ ನಮ್ಮ ಸೈನಿಕರು ಪಾಕಿಸ್ತಾನವನ್ನೇ ನಿರ್ನಾಮ ಮಾಡಬೇಕು. ಅಂದರೆ ಜಗತ್ತಿನಲ್ಲಿ ಉಗ್ರವಾದ ನಿಲ್ಲುತ್ತದೆ ಎಂದರು.

ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ ವಿಶೇಷ ಪೂಜೆ ನೆರವೇರಿಸಿದರು. ಈವೇಳೆ ಶ್ರೀಪಾದಭಟ್ಟ ಜೋಷಿ, ಶ್ರೀಪಾದ ಕುಲಕರ್ಣಿ, ಅರುಣ ಕುಲಕರ್ಣಿ(ಕುರಗಡ್ಡಿ), ಆನಂದ ಕುಲಕರ್ಣಿ, ಮುಕುಂದಭಟ್ಟ ಸೂರಭಟ್ಟನವರ, ನಾಗೇಶಭಟ್ಟ ಗ್ರಾಮಪುರೋಹಿತ, ಪ್ರಶಾಂತ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ರಾಮಕೃಷ್ಣ ಸದರಜೋಷಿ, ಅರುಣ ಕುಲಕರ್ಣಿ, ಶೋಭಾ ಕುಲಕರ್ಣಿ, ಅರ್ಚನಾ ಕುಲಕರ್ಣಿ, ಅನಿತಾ ಗ್ರಾಮಪುರೋಹಿತ, ರಾಜಶ್ರೀ ಕುಲಕರ್ಣಿ, ಪರಿಮಳಾ ಗ್ರಾಮಪುರೋಹಿತ, ಪದ್ಮಾ ಕುಲಕರ್ಣಿ, ಪ್ರಭಾ ರಾಯಭಟ್ಟನವರ, ನಿಖಿತಾ ಗ್ರಾಮಪುರೋಹಿತ, ಜ್ಯೋತಿ ನಾಡಿಗೇರ, ರೂಪಾ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ, ವಿಮಲಾಬಾಯಿ ಗ್ರಾ ವ್ ು ಪ್ ು ರ್ ೋ ಹಿ ತ್, ಶ ್ ರ ್ ದ ್ ಬ ್ ಯಿ ು ಗ್ರಾ ವ್ ು ಪ್ ು ರ್ ೋ ಹಿ ತ್ ಇನ್ನಿತರರಿದ್ದರು.

> ಡಾ. ನಾಗರಾಜ ಮಾತನಾಡಿ, ಕೇಂದ್ರದಲ್ಲಿ ಅಧಿಕಾರದಲ್ಲಿರುವ ನರೇಂದ್ರ ಮೋದಿ ಸರಕಾರ ಉಗ್ರರ ಬೆಂಬಲಿಗರಿಗೆ ತಕ್ಕ ಪಾಠವನ್ನು ಕಲಿಸುತ್ತಿದೆ. ಪಹಲ್ಗಾಮ ದಾಳಿಯಲ್ಲಿ ಪಾಲ್ಗೊಂಡ ಆ ನಾಲ್ವರು ಉಗ್ರರನ್ನು ಸದೆಬಡಿಯಬೇಕು. ಅವರಿಂದ ನೊಂದು–ಬೆಂದ ಕುಟುಂಬದವರಿಗೆ ಸಾಂತ್ವನ ನೀಡಬೇಕು ಎಂದರು.

## ಹುತಾತ್ಮ ಯೋಧ ಮುರಳಿ ಪಾರ್ಥಿವ ಶರೀರ ಸ್ವಗ್ರಾಮಕ್ಕೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು




ಭಾರತ–ಪಾಕಿಸ್ತಾನ ನಡುವಿನ ಕದನದಲ್ಲಿ ಯುವ ಸೈನಿಕ ಎಂ.ಮುರಳಿ ನಾಯಕ್ ಹುತಾತ್ಮರಾಗಿದ್ದಾರೆ. ಮೂಲತಃ ಆಂಧ್ರಪ್ರದೇಶದವರಾದ ಮುರಳಿ ಅವರ ಪಾರ್ಥಿವ ಶರೀರವು ಶನಿವಾರ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದು, ಅಲ್ಲಿಂದ ಚಿಕ್ಕಬಳ್ಳಾಪುರ ಮಾರ್ಗವಾಗಿ ಹುಟ್ಟೂರು ಸೇರಲಿದೆ.

ಆಂಧ್ರಪ್ರದೇಶದ ಸತ್ಯಸಾಯಿ ಜಿಲ್ಲೆಯ ಪೆನುಕೊಂಡ ವಿಧಾನಸಭಾ ಕ್ಷೇತ್ರದ ಗೋರಂಟ್ಲ ಮಂಡಲದ ಹಳ್ಳಿಯೊಂದರಲ್ಲಿ ಜನಿಸಿದ ಮುರಳಿ ಅವರನ್ನು ಅವರ ಚಿಕ್ಕಪ್ಪ ಲಕ್ಷ್ಮಣ ನಾಯಕ್ ಅಲ್ಲಿಯೇ ಬೆಳೆಸಿದರು. ಸಮವಸ್ತ್ರದಲ್ಲಿ ದೇಶ ಸೇವೆ ಮಾಡುವ ಕನಸು ಕಂಡಿದ್ದ ಮುರಳಿ ಬಾಲ್ಯದಿಂದಲೂ ಪೊಲೀಸ್ ಅಥವಾ ಸಶಸ್ತ್ರ ಪಡೆಗಳಿಗೆ ಸೇರಲು ಬಯಸಿದ್ದರು. ಬಿಕಾಂ ಓದುತ್ತಿರುವಾಗಲೇ ಅವರು ಸಶಸ್ತ್ರ ಪಡೆಗಳಿಗೂ ತಯಾರಿ ನಡೆಸುತ್ತಿದ್ದರು. ಅವರು ಎರಡು ಪ್ರಯತ್ನಗಳಲ್ಲಿ ವಿಫಲರಾಗಿ 2022ರಲ್ಲಿ ಅಗ್ನಿವೀರ್ ಯೋಜನೆಯಡಿಯಲ್ಲಿ ಆಯ್ಕೆಯಾದರು. ಶುಕ್ರವಾರ ಮುಂಜಾನೆ ಗಡಿ ನಿಯಂತ್ರಣ ರೇಖೆಯಲ್ಲಿ ನಡೆದ ದಾಳಿಯಲ್ಲಿ ಗಾಯಗೊಂಡು ಹುತಾತ್ಮರಾದರು.

ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಮುರಳಿ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ಜಮ್ಮು–ಕಾಶ್ಮೀರದ ಗಡಿಯಲ್ಲಿ ದೇಶ ಸೇವೆ ಸಲ್ಲಿಸುತ್ತಿದ್ದ ವೀರ ಯೋಧ ಮುರಳಿ ನಾಯಕ್ ಅವರ ತ್ಯಾಗ, ಬಲಿದಾನವನ್ನು ದೇಶ ಎಂದಿಗೂ ಮರೆಯುವುದಿಲ್ಲ. ಅವರ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಕುಟುಂಬದವರಿಗೆ ಈ ದುಃಖವನ್ನು ಸಹಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುವೆ ಎಂದು ಬಿಜೆಪಿ ನಾಯಕ ಎಂಪಿ ರೇಣುಕಾಚಾರ್ಯ ಹೇಳಿದ್ದಾರೆ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕೂಡ ಕಂಬನಿ ಮಿಡಿದಿದ್ದು, ಪಾಕಿಸ್ತಾನದ ವಿರುದ್ಧ ಯುದ್ಧದಲ್ಲಿ ಹುತಾತ್ಮರಾದ ಯೋಧ ಮುರಳಿ ನಾಯಕ್ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಎಂದು ಎಕ್ಸ್‌ನಲ್ಲಿ ತಿಳಿಸಿದ್ದಾರೆ.

## ಸ್ವದೇಶ ತಲುಪಲು ಆಟಗಾರರ ಪರದಾಟ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಪಾಕಿಸ್ತಾನ ಸೂಪರ್ ಲೀಗ್ ಮುಂದೂಡಿಕೆ ಹಿನ್ನೆಲೆಯಲ್ಲಿ ವಿದೇಶಿ ಆಟಗಾರರು ತಮ್ಮ ತಮ್ಮ ದೇಶಗಳಿಗೆ ತಲುಪಲು ಎಂತಹ ಪಾಡು ಪಟ್ಟಿದ್ದರು ಎಂಬ ವಿಚಾರ ಬಹಿರಂಗಗೊಂಡಿದೆ. ಪರಿಸ್ಥಿತಿ ಎಷ್ಟು ಬಿಗಡಾಯಿಸಿತ್ತೆಂದರೆ ವಿದೇಶಿ ಆಟಗಾರರನ್ನು ರಾವಲ್ಪಿಂಡಿಯ ನೂರ್ ಖಾನ್ ವಾಯುನೆಲೆಯಿಂದ ತಮ್ಮ ತಮ್ಮ ದೇಶಗಳಿಗೆ ತೆರಳಿದ ಬೆನ್ನಲ್ಲೇ ಅಲ್ಲಿಗೆ ಭಾರತದ ಕ್ಷಿಪಣಿಗಳು ಅಪ್ಪಳಿಸಿದ್ದವು. ಭಾರತೀಯ ವಾಯುಸೇನೆಯ ಸಂಯಮದಿಂದಾಗಿ ಪಾಕಿಸ್ತಾನ ಸೂಪರ್ ಲೀಗ್‌ನಲ್ಲಿ ಭಾಗವಹಿಸಿದ್ದ ಶಾನ್ ಅಬಾಟ್, ಬೆನ್ ಡ್ವಾರ್ಶಿಯಸ್ ಯಾವುದೇ ತೊಂದರೆಯಾಗಿಲ್ಲ ಎಂದು ಆಸ್ಟ್ರೇಲಿಯಾದ ಮಾಧ್ಯಮಗಳು ವರದಿ ಮಾಡಿವೆ. ಶಾನ್ ಅಬಾಟ್, ಬೆನ್ ಡ್ವಾರ್ಶುಯಿಸ್, ಆಷ್ಟನ್ ಟರ್ನರ್, ಮಿಚ್ ಓವನ್ ಸೇರಿದಂತೆ ಹಲವು ವಿದೇಶಿ ಆಟಗಾರರನ್ನು ರಾವಲ್ಪಿಂಡಿಯ ವಾಯು ನೆಲೆಯಿಂದ ಚಾರ್ಟರ್ಡ್ ವಿಮಾನಗಳ ಮೂಲಕ ದುಬೈಗೆ ಸ್ಥಳಾಂತರಿಸಲಾಯಿತು ಎಂದು ವರದಿಯಾಗಿದೆ.

# ಮೂರು ತಿಂಗಳ ಪಡಿತರ ಮುಂಗಡ ವಿತರಣೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತ ಮತ್ತು ಪಾಕಿಸ್ತಾನ ನಡುವೆ ಯುದ್ಧದ ಬಿಕ್ಕಟ್ಟು ಉಂಟಾಗಿರುವ ಹಿನ್ನೆಲೆಯಲ್ಲಿ 'ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ'ಯಡಿ ಬಿಪಿಎಲ್ ಪಡಿತರ ಚೀಟಿ ಫಲಾನುಭವಿಗಳಿಗೆ ಮೂರು ತಿಂಗಳ ಪಡಿತರವನ್ನು ಮುಂಗಡವಾಗಿ ವಿತರಿಸಲು ಕೇಂದ್ರ ಸರಕಾರ ನಿರ್ಧರಿಸಿದೆ.

ಜೂನ್, ಜುಲೈ ಮತ್ತು ಆಗಸ್ಟ್ ತಿಂಗಳ ಅಕ್ಕಿಯನ್ನು ನ್ಯಾಯಬೆಲೆ ಅಂಗಡಿಗಳ ಮೂಲಕ ಕಾರ್ಡ್‌ದಾರರಿಗೆ ವಿತರಿಸಲು ಕೇಂದ್ರ ಸರಕಾರ ಆದೇಶಿಸಿದೆ.

ಮೂರು ತಿಂಗಳ ಅವಧಿಗೆ ಆಹಾರ ಧಾನ್ಯಗಳನ್ನು ಮುಂಗಡವಾಗಿ ಭಾರತೀಯ ಆಹಾರ ನಿಗಮದ (ಎಫ್‌ಸಿಐ) ಗೋದಾಮುಗಳಿಗೆ ಸಾಗಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

ವ್ ು ು ಂ ಬ ರ್ ು ವ್ ಮುಂಗಾರಿನ ಹಿನ್ನೆಲೆಯಲ್ಲಿ ಪ್ರತಿ ಮನೆಗೂ ಆಹಾರ ಭದ್ರತೆ ಖಚಿತಪಡಿಸಿಕೊಳ್ಳಲು ಈ ನಿರ್ಧಾರ ತೆಗೆದುಕೊಳ್ಳಲಾಗಿದ್ದು, ಭಾರೀ ಮಳೆ ಸಂದರ್ಭದಲ್ಲಿ ದುರ್ಗಮ ಪ್ರದೇಶಗಳಲ್ಲಿ ಸಂಪರ್ಕ ಕಡಿತದಿಂದಾಗಿ ಉಂಟಾಗಬಹುದಾದ ಅಡೆತಡೆಗಳನ್ನು ನಿವಾರಿಸುವುದು ಇದರ ಉದ್ದೇಶವಾಗಿದೆ. ಈ ಮೂಲಕ ನ್ಯಾಯಬೆಲೆ ಅಂಗಡಿಗಳಲ್ಲಿ ಬಿಪಿಎಲ್ ಕಾರ್ಡ್‌ನ ಪ್ರತಿ ಸದಸ್ಯರಿಗೆ ತಲಾ 15 ಕೆ.ಜಿ ಅಕ್ಕಿ/ರಾಗಿ ಸಿಗಲಿದೆ.

# ಯೋಧರ ಯಶಸ್ಸಿಗಾಗಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತೀಯ ಜನತಾ ಪಾರ್ಟಿ ಗದಗ ಗ್ರಾಮೀಣ ಮಂಡಲದ ವತಿಯಿಂದ ಪಾಕಿಸ್ತಾನದ ಉಗ್ರರನ್ನು ಸದೆಬಡಿಯಲು ಸನ್ನದ್ಧರಾಗಿರುವ, ದೇಶ ರಕ್ಷಣೆಯಲ್ಲಿ ತೊಡಗಿರುವ ಭಾರತೀಯ ಯೋಧರಿಗೆ ಜಯ ಸಿಗಲಿ, ಭಾರತಮಾತೆ ವೀರಯೋಧರ ರಕ್ಷಣೆ ಮಾಡಲಿ ಹಾಗೂ ಉಗ್ರವಾದ ಸರ್ವನಾಶವಾಗಲಿ ಎಂದು ಪ್ರಾರ್ಥಿಸಿ ಗದಗ ಗ್ರಾಮೀಣ ಭಾಗದ ಸೊರಟೂರ ಗ್ರಾಮದ ಶ್ರೀ ಕಾಲಭೈರವ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಪೆಹಲ್ಗಾಮ್ ಘಟನೆಗೆ ಪ್ರತಿಯಾಗಿ ನಮ್ಮ ದೇಶದ ಸೈನಿಕರು ಆಪರೇಷನ್ ಸಿಂಧೂರ ಹೆಸರಿನಲ್ಲಿ ಉಗ್ರರ ವಿರುದ್ಧ ಯಶಸ್ವಿಯಾಗಿ ಪ್ರತೀಕಾರ ತೀರಿಸಿಕೊಳ್ಳುತ್ತಿರುವದು ಶ್ಲಾಘನೀಯ. ಭಾರತದ ಮಹಿಳೆಯರ ನೋವಿನ ಪ್ರತೀಕಾರಕ್ಕಾಗಿ ಶತ್ರುಗಳನ್ನು ನಾಶಪಡಿಸಲು ನಮ್ಮ ದೇಶದ ನೆಚ್ಚಿನ ಸೈನಿಕರಿಗೆ ಹಾಗೂ ದೇಶದ ಪ್ರಧಾನಿ ನರೇಂದ್ರ ಮೋದಿಯವರಿಗೆ ಶ್ರೀ ಕಾಲಭೈರವ ಅನುಗ್ರಹಿಸಲಿ ಎಂದರು.

ಬಿಜೆಪಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಭದ್ರೇಶ ಕುಸ್ಲಾಪೂರ ಮಾತನಾಡಿ, ಅಮಾಯಕರ ಹತ್ಯೆ ಮಾಡಲು ಕುಮ್ಮಕ್ಕು ನೀಡುತ್ತಿರುವ ಪಾಕಿಸ್ತಾನದ ಉಗ್ರರ ನೆಲೆಗಳ ಮೇಲೆ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರ ಸೂಚನೆಯಂತೆ ನಮ್ಮ ಸೈನಿಕರು ಉಗ್ರರ ಮೇಲೆ ದಾಳಿ ಮಾಡಿ 100ಕ್ಕೂ ಹೆಚ್ಚು ಉಗ್ರರನ್ನು ಬಲಿಪಡೆದಿದ್ದು ಸ್ವಾಗತಾರ್ಹ ಎಂದರು.

ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಮಾತನಾಡಿ, ಭಯೋತ್ಪಾದಕರ ವಿರುದ್ಧ ಭಾರತವು ಗೆಲ್ಲಬೇಕು ಎನ್ನುವದು ಪ್ರತೀ ಭಾರತೀಯನ ಆಸೆಯಾಗಿದೆ. ಭಾರತದ ಸೈನಿಕರು ಈ ಯುದ್ಧದಲ್ಲಿ ವಿಜಯಶೀಲರಾಗುತ್ತಾರೆಂದು ವಿಶ್ವಾಸದಿಂದ ನುಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ರಾಮಣ್ಣ ಕಮ್ಮಾರ, ಸುರೇಶ ಮರಳಪ್ಪನವರ, ಕೆ.ಪಿ. ಕೋಟಿಗೌಡ್ರ, ವಾಯ್.ಪಿ. ಅಡ್ನೂರ, ಬಾಬು ಸುಂಕದ, ಅರವಿಂದ ಅಣ್ಣಿಗೇರಿ, ಅವರವಿಂದಗೌಡ ಪಾಟೀಲ, ಶಿವಪ್ಪ ಅಗಡಿ, ಮಾಂತೇಶ ಘೊಡ್ಕೆ, ಯಲ್ಲಪ್ಪ ಕನ್ನೂರ, ಮೈಲಾರಪ್ಪ ಕಪ್ಪಣ್ಣವರ, ಶರಣಪ್ಪ ಬಂಕಾಪೂರ, ಸಂತೋಷ ಗುಡಿ, ಲಕ್ಷ್ಮಣ ರಣತೂರ, ಅರ್ಚಕರಾದ ಯಲ್ಲಪ್ಪ ಹೂಗಾರ ಮುಂತಾದವರಿದ್ದರು.

## ಭಾರತ ಸರ್ಕಾರಕ್ಕೆ ಸಂಪೂರ್ಣ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಗದಗ



ಜಮ್ಮು ಮತ್ತು ಕಾಶ್ಮೀರದಲ್ಲಿ ಅಮಾಯಕರ ಮೇಲೆ ನಡೆದ ಗುಂಡಿನ ದಾಳಿಗೆ ಪ್ರತೀಕಾರವಾಗಿ ಭಾರತ ಸರ್ಕಾರ ಕೈಗೊಂಡ ಕ್ರಮಕ್ಕೆ ಸಮಸ್ತ ಭಾರತೀಯರೆಲ್ಲರೂ ಹೆಮ್ಮೆ ಪಡುತ್ತಿದ್ದಾರೆ. ಇದರ ಪರಿಣಾಮ ಏನೇ ಆಗಿದ್ದರೂ ಭಾರತದ ಪ್ರತಿಯೊಬ್ಬ ಪ್ರಜೆ ಭಾರತ ಸರಕಾರ ಮತ್ತು ಸೈನಿಕರ ಜೊತೆ ನಿಲ್ಲುತ್ತಾರೆ ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್.ನಾಗರಕಟ್ಟಿ ಹೇಳಿದ್ದಾರೆ.

ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಕೇಂದ್ರ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಉಗ್ರರು ಎಲ್ಲಿಯೇ ಅಡಗಿದ್ದರೂ ಅವರನ್ನು ಮಟ್ಟ ಹಾಕುವ ಸಾಮರ್ಥ್ಯ ನಮ್ಮ ದೇಶಕ್ಕೆ ಇದೆ ಎಂಬುದನ್ನು ಇಡೀ ಜಗತ್ತಿಗೆ ತೋರಿಸುವ ಸಮಯ ಬಂದಿದೆ. ಭಾರತದ ಸೈನಿಕರು ಈ ಸಾಮರ್ಥ್ಯವನ್ನು ಹೊಂದಿದ್ದಾರೆ. ಈಗಿನ ಯುದ್ಧದ ಸಂದರ್ಭದಲ್ಲಿ ಸಂಪೂರ್ಣ ಯುದ್ಧವಾದರೆ ಭಾರತ ಸರ್ಕಾರ ಮತ್ತು ಸೇನೆಯ ಜೊತೆ ಪ್ರತಿಯೊಬ್ಬ ಮುಸಲ್ಮಾನರು ನಿಲ್ಲುತ್ತಾರೆ ಎಂದರು.

ಪ್ರಸ್ತುತ ಸಮಯದಲ್ಲಿ ಸಮಸ್ತ ಭಾರತೀಯರೆಲ್ಲರೂ ಭಾರತದ ಸಾರ್ವಭೌಮತ್ವಕ್ಕಾಗಿ ಯಾವುದೇ ತ್ಯಾಗ ಮಾಡಲೂ ಸಿದ್ಧರಿದ್ದಾರೆ. ನಮ್ಮ ಶಾಂತಿಯ ತತ್ವವನ್ನು ಅವರು ಅಸಹಾಯಕತೆ ಎಂದು ತಿಳಿದುಕೊಂಡಿದ್ದರು. ಆದರೆ ಈಗ ನಮ್ಮ ಸೈನಿಕರು ಇಡೀ ವಿಶ್ವಕ್ಕೆ ನಮ್ಮ ಶಕ್ತಿಯನ್ನು ತೋರಿಸಿದ್ದಾರೆ. ಭಾರತ ಸರಕಾರವು ತೆಗೆದುಕೊಳ್ಳುವ ಯಾವುದೇ ಕ್ರಮಕ್ಕೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಸಂಪೂರ್ಣ ಬೆಂಬಲ ನೀಡುತ್ತದೆ ಎಂದರು.

ಈ ಸಂದರ್ಭದಲ್ಲಿ ಪ್ರಮುಖರಾದ ಪ್ರೊ. ಚಾಂದಪಾಷಾ, ಎಂ.ಡಿ. ಜಾಫರ್ ಡಾಲಾಯತ, ತಯ್ಯೆಬ ಅಥಣಿ, ರಹೀಂಸಾಬ್ ದೊಡ್ಡಮನಿ, ನಾಸಿರ್ ನರೇಗಲ್, ಮುನ್ನ ಕಲ್ಮನಿ, ಎಂ.ಐ. ಮುಲ್ಲಾ, ರಫೀಕ್ ಮುಲ್ಲಾನವರ, ಎಂ.ಎಂ. ಶಿರಹಟ್ಟಿ, ಯಾಸಿನ್ ಎ.ಮುಲ್ಲಾ, ಅಫ್ಜಲ್ ಮನಿಯಾರ, ಯಾಸಿನ್ ಮುಲ್ಲಾದರವೇಶ್, ಮೊಹಮ್ಮದ ಯೂಸುಫ್, ಯಾಸಿನ್ ಖವಾಸ್ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka